ಸಂಪುಟ 01 । ಸಂಚಿಕೆ 242 ಶುಕ್ರವಾರ 06 ನವೆಂಬರ್ 2026 । ಪುಟ 4 । ಬೆಲೆ-2 ರೂ.

Posting registration number : RCR/RNP/116/2026-2028

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

ನೈಜ್ಯ ದೇಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

ಈ ದಿನದ ವಿಶೇಷ

1)ಧನ್ತೇರಸ್ (Dhanteras): ಇಂದು ಕೃಷ್ಣ ಪಕ್ಷದ ದ್ವಾದಶಿ ಮುಗಿದು ತ್ರಯೋದಶಿ ತಿಥಿ ಪ್ರಾರಂಭವಾಗುವುದರಿಂದ, ದೀಪಾವಳಿ ಹಬ್ಬದ ಆರಂಭವನ್ನು ಸೂಚಿಸುವ ಪವಿತ್ರ ಧನ್ತೇರಸ್ ಹಬ್ಬದ ಆಚರಣೆ ಇದೆ.

2) ರಾಷ್ಟ್ರೀಯ ನ್ಯಾಚೋಸ್ ದಿನ (National Nachos Day) ವನ್ನು ಆಚರಿಸಲಾಗುತ್ತದೆ.

ಸುಭಾಷಿತ

ಶಿಕ್ಷಣದ ಬೇರುಗಳು ಕಹಿ ಇರಬಹುದು, ಆದರೆ ಅದರ ಫಲ ಸಿಹಿಯಾಗೇ ಇರುತ್ತದೆ

–ಅರಿಸ್ಟಾಟಲ್

ಅಖಿಲ ಭಾರತ ಕಾಂಗ್ರೆಸ್ ನ ವೃತ್ತಿಪರ ಘಟಕದ ರಾಷ್ಟ್ರೀಯ ಅಧ್ಯಕ್ಷ ಮಧು ಯಾಕ್ಷಿ ಗೌಡ ಹಾಗೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭೇಟಿ

❏ ನೈಜ್ಯ ದೇಸೆ ನ್ಯೂಸ್

ತಾಂಡವಪುರ ನವಂಬರ್ 5 ಅಖಿಲ ಭಾರತ ಕಾಂಗ್ರೆಸ್ ನ ವೃತ್ತಿಪರ ಘಟಕದ ರಾಷ್ಟ್ರೀಯ ಅಧ್ಯಕ್ಷ ರಾಧ ಮಧು ಯಾಕ್ಷಿ ಗೌಡ ರವರು ಬೆಂಗಳೂರಿನ ಅವರು ನಿವಾಸ್ ದಲ್ಲಿಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಹೂಗುಚ್ಚ ನೀಡಿ ಅಭಿನಂದಿಸಿ ಸ್ವಾಗತ ಕೋರಿ ಪಕ್ಷದ ಹಲವು ವಿಚಾರಗಳ ಬಗ್ಗೆ ಚರ್ಚಿಸಿದರು



ಈ ಸಂದರ್ಭದಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಹ ಕಾಂಗ್ರೆಸ್ ಪಕ್ಷದ ಇತ್ತೀಚಿನ ಬೆಳವಣಿಗೆ ಮತ್ತು ಪಕ್ಷ ಸಂಘಟನೆ ಕುರಿತು ಹಾಗೂ ಹಿಂದೂ ಹಲವಾರು ವಿಚಾರಗಳ ಬಗ್ಗೆ ಸಿದ್ದರಾಮಯ್ಯ ಅವರು ವಿವರವಾಗಿ ವಿವರಿಸಿದರು ಈ ಸಂದರ್ಭದಲ್ಲಿ ಸಚಿವರಾದ ಜಮೀರ್ ಅಹಮದ್ ಖಾನ್, ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ನಗರ ಅಭಿವೃದ್ಧಿ ಸಚಿವರು ಆದ ಡಾ. ಎಸ್ ಯತಿಂದ್ರ ಸಿದ್ದರಾಮಯ್ಯ, ಜೈವಿಕ ಇಂಧನ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಸುದೀಂದ್ರ ಹಾಗೂ ಮುಂತಾದವರು ಈ ಸಂದರ್ಭದಲ್ಲಿ ಹಾಜರಿದ್ದರು

ನೈಜ್ಯ ದೇಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

ಒಂದು ಕೋಟಿ ಮತದಾರರ ಹೆಸರು ಕಡಿತ ಆರೋಪ: ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ

❏ ನೈಜ್ಯ ದೇಸೆ ನ್ಯೂಸ್

ತಾಂಡವಪುರ: ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್ಐಆರ್) ಪ್ರಕ್ರಿಯೆಯು ಕಾನೂನು ಹಾಗೂ ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿದೆ. ಈ ಪ್ರಕ್ರಿಯೆಯನ್ನು ಕೂಡಲೇ ರದ್ದುಗೊಳಿಸಬೇಕು ಮತ್ತು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಸಿದ್ದರಾಮಯ್ಯ ಅವರು ಒತ್ತಾಯಿಸಿದರು. ಇಂದು ಎಸ್ ಐ ಆರ್ ಪ್ರಕ್ರಿಯೆ ವಿರೋಧಿಸಿ ಹಾಗೂ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಒತ್ತಾಯಿಸಿ ಕೆಪಿಸಿಸಿ ವತಿಯಿಂದ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ಹಮ್ಮಿಕೊಂಡಿದ್ದ ಬೃಹತ್ ಪ್ರತಿಭಟನೆಯಲ್ಲಿ ಪಾಲ್ಗೊಂಡು, ಮಾತನಾಡಿದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ರವರು ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ದುರ್ಬಲಗೊಳಿಸುವ ಹಾಗೂ ಅರ್ಹ ಮತದಾರರ ಮತದಾನದ ಹಕ್ಕಿಗೆ ಧಕ್ಕೆ ತರುವ ಯಾವುದೇ ಪ್ರಯತ್ನಗಳನ್ನು ಸಹಿಸಲು ಸಾಧ್ಯವಿಲ್ಲ ಎಂದು ಎಚ್ಚರಿಸಿದರು.

ಎಸ್ಐಆರ್ ರದ್ದತಿ ಮತ್ತು ಮುಖ್ಯ ಚುನಾವಣಾ ಆಯುಕ್ತರ ರಾಜೀನಾಮೆ ಎಂಬ ಎರಡು ಪ್ರಮುಖ ಬೇಡಿಕೆಗಳನ್ನು ಮುಂದಿಟ್ಟುಕೊಂಡು ದೇಶಾದ್ಯಂತ ಹೋರಾಟ ನಡೆಯುತ್ತಿದೆ. ನವೆಂಬರ್ 1ರಂದು ದೆಹಲಿಯಲ್ಲಿ ಈ ಸಂಬಂಧ ಬೃಹತ್ ಪ್ರತಿಭಟನಾ ಸಮಾವೇಶ ನಡೆದಿದ್ದು, ಕರ್ನಾಟಕದಲ್ಲಿಯೂ ಕಾಂಗ್ರೆಸ್ ಹಾಗೂ ಇಂಡಿಯಾ ಒಕ್ಕೂಟದ ಸದಸ್ಯ ಪಕ್ಷಗಳು ಹೋರಾಟವನ್ನು ಮುಂದುವರಿಸಿವೆ. ಇದು ಕೇವಲ ಮತದಾರರ ಪಟ್ಟಿಯ ಪರಿಷ್ಕರಣೆಗೆ ಸಂಬಂಧಿಸಿದ ವಿಚಾರವಲ್ಲ. ದೇಶದ ಸಂವಿಧಾನ, ಪ್ರಜಾಪ್ರಭುತ್ವ ಮತ್ತು ಮತದಾರರ ಹಕ್ಕುಗಳ ರಕ್ಷಣೆಗೆ ಸಂಬಂಧಿಸಿದ ಮಹತ್ವದ ಹೋರಾಟವಾಗಿದೆ ಎಂದು ತಿಳಿಸಿದರು. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ನೇಮಕಾತಿ ಪ್ರಕ್ರಿಯೆಯ ಕುರಿತು ಪ್ರಶ್ನೆಗಳನ್ನು ಎತ್ತಿದ ಅವರು, ಚುನಾವಣಾ ಆಯುಕ್ತರ ನೇಮಕಾತಿಗೆ ಸಂಬಂಧಿಸಿದ ಆಯ್ಕೆ ಸಮಿತಿಯ ರಚನೆಯನ್ನು ಕೇಂದ್ರ ಸರ್ಕಾರ ಬದಲಾಯಿಸಿರುವುದೇ ಗಂಭೀರ ವಿಚಾರವಾಗಿದೆ.

ಹಿಂದೆ ಪ್ರಧಾನಮಂತ್ರಿ, ಲೋಕಸಭೆಯ ವಿರೋಧ ಪಕ್ಷದ ನಾಯಕ ಹಾಗೂ ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಯನ್ನು ಒಳಗೊಂಡಿದ್ದ ಆಯ್ಕೆ ಸಮಿತಿಯ ವ್ಯವಸ್ಥೆಯನ್ನು ಬದಲಾಯಿಸಿ, ಮುಖ್ಯ ನ್ಯಾಯಮೂರ್ತಿಯ



ಬದಲಿಗೆ ಕೇಂದ್ರ ಸಚಿವರೊಬ್ಬರನ್ನು ಸಮಿತಿಯ ಸದಸ್ಯರನ್ನಾಗಿ ಮಾಡುವ ಕಾನೂನನ್ನು ಜಾರಿಗೆ ತರಲಾಯಿತು. ಆ ಮೂಲಕ ಆಯ್ಕೆ ಪ್ರಕ್ರಿಯೆಯಲ್ಲಿ ಕೇಂದ್ರ ಸರ್ಕಾರದ ಪ್ರಾಬಲ್ಯ ಹೆಚ್ಚುವಂತೆ ಮಾಡಲಾಗಿದೆ ಎಂದು ಆರೋಪಿಸಿದರು. ಜ್ಞಾನೇಶ್ ಕುಮಾರ್ ಅವರ ನೇಮಕಾತಿಯ ಸಂದರ್ಭದಲ್ಲಿ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಆಕ್ಷೇಪ ವ್ಯಕ್ತಪಡಿಸಿದ್ದರೂ ನೇಮಕಾತಿಯನ್ನು ಮುಂದುವರಿಸಲಾಯಿತು.

ಚುನಾವಣಾ ಆಯೋಗದಂತಹ ಮಹತ್ವದ ಸಾಂವಿಧಾನಿಕ ಸಂಸ್ಥೆಯ ನೇಮಕಾತಿ ಪ್ರಕ್ರಿಯೆ ಪಾರದರ್ಶಕವಾಗಿರಬೇಕು. ಅದರ ಸ್ವಾಯತ್ತತೆ ಮತ್ತು ನಿಷ್ಪಕ್ಷಪಾತ ಕಾರ್ಯನಿರ್ವಹಣೆಯ ಬಗ್ಗೆ ಸಾರ್ವಜನಿಕರಲ್ಲಿ ವಿಶ್ವಾಸ ಮೂಡುವಂತಿರಬೇಕು. ಆದರೆ ಕೇಂದ್ರ ಸರ್ಕಾರ ಚುನಾವಣಾ ಆಯೋಗವನ್ನು ತನ್ನ ರಾಜಕೀಯ ಹಿತಾಸಕ್ತಿಗೆ ಬಳಸಿಕೊಳ್ಳಲು ಪ್ರಯತ್ನಿಸುತ್ತಿದೆ ಎಂದು ದೂರಿದರು.

2024ರ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಕೇವಲ 240 ಸ್ಥಾನಗಳನ್ನು ಗೆದ್ದಿದ್ದು, ಸ್ವಂತ ಬಲದಿಂದ ಬಹುಮತ ಪಡೆಯಲು ಸಾಧ್ಯವಾಗಲಿಲ್ಲ. ಮಿತ್ರಪಕ್ಷಗಳ ಬೆಂಬಲದೊಂದಿಗೆ ಸರ್ಕಾರ ರಚಿಸಿದ ನಂತರ ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಚುನಾವಣಾ ವ್ಯವಸ್ಥೆಯ ಮೇಲೆ ಪ್ರಭಾವ ಬೀರುವ ಪ್ರಯತ್ನಗಳನ್ನು ಆರಂಭಿಸಿದ್ದಾರೆ.

ಚುನಾವಣಾ ಆಯೋಗದ ಸ್ವಾಯತ್ತತೆಗೆ ಧಕ್ಕೆ ತರುವ ಮೂಲಕ ತಮ್ಮ ರಾಜಕೀಯ ಹಿತಾಸಕ್ತಿಗಳನ್ನು ಸಾಧಿಸಿಕೊಳ್ಳಲು ಮುಂದಾಗಿದ್ದಾರೆ ಎಂದು ಸಿದ್ದರಾಮಯ್ಯ ಅವರು ಆರೋಪಿಸಿದರು. ಯಾವುದೇ ಅರ್ಹ ಮತದಾರರ ಹೆಸರನ್ನು ಸೂಕ್ತ ಕಾರಣವಿಲ್ಲದೆ ಅಥವಾ ಕಾನೂನುಬದ್ಧ ಪ್ರಕ್ರಿಯೆ ಪಾಲಿಸದೆ ಮತದಾರರ ಪಟ್ಟಿಯಿಂದ ತೆಗೆದುಹಾಕುವುದು ಅವರ ಮತದಾನದ ಹಕ್ಕಿಗೆ ಧಕ್ಕೆ ತರುವಂತಾಗಿದೆ. ದೇಶದ ಪ್ರತಿಯೊಬ್ಬ ಅರ್ಹ ನಾಗರಿಕನಿಗೂ ಮತದಾನ ಮಾಡುವ ಅವಕಾಶ ದೊರೆಯಬೇಕು. ಆದರೆ ಎಸ್ಐಆರ್ ಹೆಸರಿನಲ್ಲಿ ದೊಡ್ಡ ಪ್ರಮಾಣದಲ್ಲಿ ಮತದಾರರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಮತದಾರರ ಪಟ್ಟಿಯನ್ನು ಪರಿಷ್ಕರಿಸುವುದು ಚುನಾವಣಾ ಆಯೋಗದ ಜವಾಬ್ದಾರಿಯಾದರೂ, ಆ ಪ್ರಕ್ರಿಯೆಯಲ್ಲಿ ಅರ್ಹ ಮತದಾರರು ತಮ್ಮ ಹಕ್ಕಿನಿಂದ ವಂಚಿತರಾಗದಂತೆ ನೋಡಿಕೊಳ್ಳುವುದು ಅತ್ಯಂತ ಅಗತ್ಯವಾಗಿದೆ ಎಂದು ಹೇಳಿದರು. ಕರ್ನಾಟಕದಲ್ಲಿ ಎಸ್ಐಆರ್ ಪ್ರಕ್ರಿಯೆಗೂ ಮುನ್ನ ಸುಮಾರು 5.54 ಕೋಟಿ ಮತದಾರರಿದ್ದು, ಪರಿಷ್ಕರಣೆಯ ನಂತರ ಈ ಸಂಖ್ಯೆ ಸುಮಾರು 4.55 ಕೋಟಿಗೆ ಇಳಿಕೆಯಾಗಿದೆ. ಅಂದರೆ ಸುಮಾರು 99 ಲಕ್ಷಕ್ಕೂ ಅಧಿಕ ಮತದಾರರ ಹೆಸರುಗಳು ಕಡಿಮೆಯಾಗಿವೆ. ಇಷ್ಟು ದೊಡ್ಡ ಪ್ರಮಾಣದಲ್ಲಿ ಮತದಾರರ ಸಂಖ್ಯೆ ಇಳಿಕೆಯಾಗಿರುವುದು ಗಂಭೀರವಾಗಿ ಪರಿಶೀಲಿಸಬೇಕಾದ ವಿಚಾರವಾಗಿದೆ. ಮತದಾರರ ಹೆಸರುಗಳನ್ನು ತೆಗೆದುಹಾಕಿರುವುದಕ್ಕೆ ಸಮರ್ಪಕ ಕಾರಣಗಳನ್ನು ಬಹಿರಂಗಪಡಿಸಬೇಕು. ಯಾವುದೇ ಅರ್ಹ ಮತದಾರ ಮತದಾನದ ಹಕ್ಕಿನಿಂದ ವಂಚಿತರಾಗದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಕಳೆದ ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ಬೆಂಗಳೂರಿನ ಮಹದೇವಪುರ ವಿಧಾನಸಭಾ ಕ್ಷೇತ್ರದಲ್ಲಿ ಸುಮಾರು ಒಂದು ಲಕ್ಷ ಮತಗಳನ್ನು ಅಕ್ರಮವಾಗಿ ಸೇರ್ಪಡೆಗೊಳಿಸಲಾಗಿದೆ ಎಂಬ ಆರೋಪವನ್ನು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಪ್ರಸ್ತಾಪಿಸಿದ್ದರು. ರಾಜಾಜಿನಗರದಲ್ಲಿಯೂ ಮತದಾರರ ಪಟ್ಟಿಯಿಂದ ಹೆಸರುಗಳನ್ನು ತೆಗೆದುಹಾಕಲಾಗಿದೆ ಎಂಬ ಆರೋಪಗಳು ಕೇಳಿಬಂದಿದ್ದವು. ಮತದಾರರ ಪಟ್ಟಿಯಲ್ಲಿನ ಇಂತಹ ಅಕ್ರಮಗಳ ಕುರಿತು ಸಮಗ್ರ ತನಿಖೆ ನಡೆಸಬೇಕೆಂಬ ಬೇಡಿಕೆಯನ್ನು ಮುಂದಿಟ್ಟುಕೊಂಡು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಆರಂಭವಾದ ಹೋರಾಟ ಇಂದು ದೇಶವ್ಯಾಪಿ ವಿಸ್ತರಿಸಿದೆ ಎಂದು ತಿಳಿಸಿದರು.

ಚುನಾವಣಾ ಆಯೋಗದ ಆಂತರಿಕ ಕಾರ್ಯವೈಖರಿಯ ಕುರಿತು ಇಂಗ್ಲೀಷ್ ಪತ್ರಿಕೆಯೊಂದು ಪ್ರಕಟಿಸಿರುವ ತನಿಖಾ ವರದಿಯನ್ನು ಉಲ್ಲೇಖಿಸಿದ ಅವರು, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ನೇತೃತ್ವದ ಚುನಾವಣಾ ಆಯೋಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಚುನಾವಣಾ ಆಯುಕ್ತರಾದ ಸುಖ್ಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿ ಅವರು ಕಳೆದ ಹತ್ತು ತಿಂಗಳಲ್ಲಿ ಕನಿಷ್ಠ 14 ಬಾರಿ ವಿವಿಧ ನಿರ್ಧಾರಗಳ ಕುರಿತು ಲಿಖಿತ ಆಕ್ಷೇಪಣೆಗಳನ್ನು ದಾಖಲಿಸಿರುವುದು ವರದಿಯಾಗಿದೆ ಎಂದು ಹೇಳಿದರು. ಹೊಸ ಮತದಾರರ ನೋಂದಣಿ, ಮತದಾರರ ಹೆಸರುಗಳ ಸೇರ್ಪಡೆ ಮತ್ತು ತೆಗೆದುಹಾಕುವಿಕೆ, ಮತದಾರರ ದತ್ತಾಂಶ ನಿರ್ವಹಣೆ ಹಾಗೂ ಕೆಲವು ನಿರ್ಧಾರಗಳನ್ನು ತಮ್ಮ ಗಮನಕ್ಕೆ ತರದೆ ಕೈಗೊಂಡಿರುವುದರ ಕುರಿತು ಇಬ್ಬರು ಆಯುಕ್ತರು ಆಕ್ಷೇಪ ವ್ಯಕ್ತಪಡಿಸಿರುವುದಾಗಿ ವರದಿಯಲ್ಲಿ ಉಲ್ಲೇಖಿಸಲಾಗಿದೆ.

ಚುನಾವಣಾ ಆಯೋಗದಂತಹ ಸ್ವತಂತ್ರ ಸಾಂವಿಧಾನಿಕ ಸಂಸ್ಥೆಯೊಳಗೇ ಈ ರೀತಿಯ ಆಕ್ಷೇಪಣೆಗಳು ವ್ಯಕ್ತವಾಗಿರುವುದು ಅತ್ಯಂತ ಗಂಭೀರ ವಿಚಾರವಾಗಿದೆ. ಆಯೋಗದ ನಿರ್ಧಾರಗಳು ಪಾರದರ್ಶಕವಾಗಿ ಮತ್ತು ನಿಯಮಾನುಸಾರ ನಡೆಯುತ್ತಿವೆಯೇ ಎಂಬ ಪ್ರಶ್ನೆಗಳಿಗೆ ಸಮರ್ಪಕ ಉತ್ತರ ದೊರೆಯಬೇಕಾಗಿದೆ ಎಂದು ಸಿದ್ದರಾಮಯ್ಯನವರು ಅಭಿಪ್ರಾಯಪಟ್ಟರು. 2014ರ ಲೋಕಸಭಾ ಚುನಾವಣೆಯಲ್ಲಿ ಗುಜರಾತ್ ಮಾದರಿಯ ಹೆಸರಿನಲ್ಲಿ ವ್ಯಾಪಕ ಪ್ರಚಾರ ನಡೆಸಿದ ಬಿಜೆಪಿ, 2019ರಲ್ಲಿ ಪುಲ್ವಾಮಾ ಮತ್ತು ಬಾಲಾಕೋಟ್ ಘಟನೆಗಳನ್ನು ರಾಜಕೀಯ ಲಾಭಕ್ಕಾಗಿ ಬಳಸಿಕೊಂಡಿತು. 2024ರಲ್ಲಿ ಸ್ವಂತ ಬಹುಮತ ಪಡೆಯಲು ವಿಫಲವಾದ ನಂತರ ಚುನಾವಣಾ ಪ್ರಕ್ರಿಯೆಯನ್ನೇ ತನ್ನ ರಾಜಕೀಯ ಹಿತಾಸಕ್ತಿಗೆ ಬಳಸಿಕೊಳ್ಳುವ ಪ್ರಯತ್ನಕ್ಕೆ ಮುಂದಾಗಿದೆ.

ಕೋಮುವಾದ ಮತ್ತು ಚುನಾವಣಾ ಅಕ್ರಮಗಳ ಮೂಲಕ ಅಧಿಕಾರವನ್ನು ಉಳಿಸಿಕೊಳ್ಳಲು ಬಿಜೆಪಿ ಪ್ರಯತ್ನಿಸುತ್ತಿದೆ ಎಂದು ಸಿದ್ದರಾಮಯ್ಯ ಅವರು ಆರೋಪಿಸಿದರು. ಚುನಾವಣಾ ಆಯೋಗವು ಯಾವುದೇ ರಾಜಕೀಯ ಪಕ್ಷದ ಪ್ರಭಾವಕ್ಕೆ ಒಳಗಾಗದೆ ಸ್ವತಂತ್ರವಾಗಿ ಕಾರ್ಯನಿರ್ವಹಿಸಬೇಕು.

ಕಂಪ್ಲಿ: ಸರ್ಕಾರಿ ಶಾಲೆಯ ಅಭಿವೃದ್ಧಿಗೆ ನೂತನ ಸಾರಥಿ ಪಟ್ಟ; ಅಧ್ಯಕ್ಷರಾಗಿ ಗಂಗಾಧರ, ಉಪಾಧ್ಯಕ್ಷರಾಗಿ ಸುನಿತಾ ಸರ್ವಾನುಮತದಿಂದ ಆಯ್ಕೆ

❏ ನೈಜ್ಯ ದೇಸೆ ನ್ಯೂಸ್

ಕಂಪ್ಲಿ: ಮಕ್ಕಳ ಉಜ್ವಲ ಭವಿಷ್ಯ ಹಾಗೂ ಶಾಲೆಯ ಮೂಲಸೌಕರ್ಯದ ಪ್ರಗತಿಗೆ ಪೂರಕವಾಗಿ ಇಲ್ಲಿನ ಎಂ.ಡಿ. ಕ್ಯಾಂಪ್‌ನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗೆ (SDMC) ಹೊಸ ರಕ್ತ ತುಂಬಲಾಗಿದೆ.

ಬುಧವಾರ ನಡೆದ ಮಹತ್ವದ ಸಭೆಯಲ್ಲಿ ನೂತನ ಅಧ್ಯಕ್ಷರಾಗಿ ಗಂಗಾಧರ ಹಾಗೂ ಉಪಾಧ್ಯಕ್ಷರಾಗಿ ಸುನಿತಾ ಅವರು ಸರ್ವಾನುಮತದಿಂದ ಆಯ್ಕೆಯಾಗಿದ್ದಾರೆ. ಪಟ್ಟಣದ 22ನೇ ವಾರ್ಡ್‌ನಲ್ಲಿರುವ ಈ ಶಾಲೆಯ ಆವರಣದಲ್ಲಿ ಪೋಷಕರು,



ಶಿಕ್ಷಕರು ಹಾಗೂ ಶಿಕ್ಷಣಾಭಿಮಾನಿಗಳ ಸಮ್ಮುಖದಲ್ಲಿ ಸಭೆ ಜರುಗಿತು. ಶಾಲೆಯ ಶೈಕ್ಷಣಿಕ ಗುಣಮಟ್ಟವನ್ನು ಎತ್ತಿಹಿಡಿಯುವ ನಿಟ್ಟಿನಲ್ಲಿ ನೂತನ ಪದಾಧಿಕಾರಿಗಳ ಜೊತೆಗೆ ಒಟ್ಟು 16 ಜನ ಉತ್ಸಾಹಿ ಸದಸ್ಯರ ಬಲಿಷ್ಠ ತಂಡವನ್ನು ಒಮ್ಮತದಿಂದ ರಚಿಸಲಾಯಿತು.

ಸದಸ್ಯರ ಬಳಗ: ಸಮಿತಿಯ ನೂತನ ಸದಸ್ಯರಾಗಿ ಸುರೇಶ, ಶಂಕರ್, ಚಿನ್ನ ರಾಮುಡು, ಅಂಜಿ, ವೆಂಕಟೇಶ, ರಾಮಾಂಜಿನಿ, ಆನಂದ, ರೇಣುಕಾ, ಯಶೋಧಾ, ಲಕ್ಷ್ಮಿ, ನೀಲಮ್ಮ, ಹುಲಿಗೆಮ್ಮ, ಕೃಷ್ಣವೇಣಿ, ಹುಲಿಗೆಮ್ಮ, ಶಬೀನಾ ಬಾನು ಮತ್ತು ಸಣ್ಣ ಮೂರ್ತಿ ಅವರು ಜವಾಬ್ದಾರಿ ವಹಿಸಿಕೊಂಡಿದ್ದಾರೆ.

ಮಾಲಾರ್ಪಣೆ, ಹೂಗುಚ್ಛ ನೀಡಿ ಗೌರವ: ಆಯ್ಕೆಯಾದ ತಕ್ಷಣವೇ ನೂತನ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರಿಗೆ ಹೂಮಾಲೆ ಹಾಕಿ, ಶಾಲೆಯ ಪ್ರಗತಿಗೆ ಒಟ್ಟಾಗಿ ಶ್ರಮಿಸುವಂತೆ ಹಾರೈಸಿ ಗೌರವಿಸಲಾಯಿತು. ಈ ಸಮಿತಿ ರಚನೆಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಹನುಮಂತಪ್ಪ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಕೆ. ದೊಡ್ಡ ಬಸಪ್ಪ, ಪುರಸಭೆಯ ಮಾಜಿ ಸದಸ್ಯ ಆಂಜನೇಯ, ಶಾಲೆಯ ಮುಖ್ಯಶಿಕ್ಷಕಿ ನಾಗರತ್ನ ಹಾಗೂ ಸಹ ಶಿಕ್ಷಕರು ಭಾಗವಹಿಸಿ ನೂತನ ತಂಡಕ್ಕೆ ಶುಭ ಹಾರೈಸಿದರು.

ವರದಿ: ಜಿಲಾನಸಾಬ್ ಬಡಿಗೇರ್

ಗ್ರಾಮ ಆರೋಗ್ಯ, ನೈರ್ಮಲ್ಯ ಮತ್ತು ಪೌಷ್ಟಿಕ ಆಹಾರ ದಿನಾಚರಣೆ

ಗರ್ಭಿಣಿಯರು ಉತ್ತಮ ಪೌಷ್ಟಿಕ ಆಹಾರ ಸೇವನೆಯಿಂದ ಆರೋಗ್ಯ ವೃದ್ಧಿ

❏ ನೈಜ್ಯ ದೇಸೆ ನ್ಯೂಸ್

ಸಿಂಧನೂರು: ತಾಲೂಕಿನ ಸಮೀಪದ ಜವಳಗೇರಾ ಗ್ರಾಮದ ಮಾರುತಿ ನಗರದ ಅಂಗನವಾಡಿ ಕೇಂದ್ರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು, ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಿಂಧನೂರು ಇವರ ಸಂಯುಕ್ತ ಆಶ್ರಯದಲ್ಲಿ ಗ್ರಾಮ ಆರೋಗ್ಯ,

ನೈರ್ಮಲ್ಯ ಮತ್ತು ಪೌಷ್ಟಿಕ ಆಹಾರ ದಿನಾಚರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಮಾತನಾಡಿ, ಆರೋಗ್ಯಕರ ಜೀವನಶೈಲಿ, ವೈಯಕ್ತಿಕ ಸ್ವಚ್ಛತೆ, ಪರಿಸರ ನೈರ್ಮಲ್ಯ ಹಾಗೂ ಸಮತೋಲಿತ ಪೌಷ್ಟಿಕ ಆಹಾರದ ಮಹತ್ವದ ಕುರಿತು ಮಾಹಿತಿ ನೀಡಿದರು. ಗರ್ಭಿಣಿಯರು, ಬಾಣಂತಿಯರು



ಹಾಗೂ ಮಕ್ಕಳು ಉತ್ತಮ ಆರೋಗ್ಯ ಕಾಪಾಡಿಕೊಳ್ಳಲು ಪೌಷ್ಟಿಕ ಆಹಾರ ಸೇವನೆ ಅತ್ಯಂತ ಅಗತ್ಯವಾಗಿದೆ.

ಗರ್ಭಾವಸ್ಥೆಯಲ್ಲಿ ಪೌಷ್ಟಿಕಾಂಶಯುಕ್ತ ಆಹಾರ ಸೇವಿಸುವುದರಿಂದ ತಾಯಿ ಮತ್ತು ಮಗುವಿನ ಆರೋಗ್ಯ ಉತ್ತಮವಾಗಿರುತ್ತದೆ. ಬಾಣಂತಿಯರು ಪೌಷ್ಟಿಕ ಆಹಾರ ಸೇವಿಸುವುದರಿಂದ ತಾಯಿಯ ಆರೋಗ್ಯ ಸುಧಾರಿಸುವುದರ ಜೊತೆಗೆ ಎದೆಹಾಲುಣಿಸುವಿಕೆಗೆ ಸಹಕಾರಿಯಾಗುತ್ತದೆ. ಮಗುವಿಗೆ ಜನನದಿಂದ ಆರು ತಿಂಗಳವರೆಗೆ ತಾಯಿಯ ಎದೆಹಾಲನ್ನು ಮಾತ್ರ ನೀಡಬೇಕು. ಆರು ತಿಂಗಳ ನಂತರ ಎದೆಹಾಲಿನೊಂದಿಗೆ ಪೂರಕ ಪೌಷ್ಟಿಕ ಆಹಾರ ನೀಡಬೇಕು ಎಂದು ತಿಳಿಸಿದರು.

ದೇವರಗುಡ್ಡದ ಹಿರಿಯ ಸಾಹಿತಿ, ಕಲಾವಿದ ಭೀಮರಾಯ ಭಂಡಾರಿಗೆ ರಂಗ ಗೌರವ ಪ್ರಶಸ್ತಿ

ಹುನಗುಂದದಲ್ಲಿ ಸಚಿವ ವಿಜಯಾನಂದ ಎಸ್. ಕಾಶಪ್ಪನವರರಿಂದ ಪ್ರಶಸ್ತಿ ಪ್ರದಾನ; ಹನುಮಂತಪ್ಪ ಮನ್ನಾಪೂರಿ ಹರ್ಷ

❏ ನೈಜ್ಯ ದೇಸೆ ನ್ಯೂಸ್

ದೇವದುರ್ಗ: ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ದೇವರಗುಡ್ಡ ಗ್ರಾಮದ ಹಿರಿಯ ಸಾಹಿತಿ, ಚಿಂತಕ, ಹೋರಾಟಗಾರ ಹಾಗೂ ಕಲಾವಿದ ಭೀಮರಾಯ ಭಂಡಾರಿ ಅವರು 2023–24ನೇ ಸಾಲಿನ ಪ್ರತಿಷ್ಠಿತ ರಂಗ ಗೌರವ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ನವೆಂಬರ್ 4ರಂದು ಬಾಗಲಕೋಟೆ ಜಿಲ್ಲೆಯ ಹುನಗುಂದ ಪಟ್ಟಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕರ್ನಾಟಕ ಸರ್ಕಾರದ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ಯಮಗಳ ಇಲಾಖೆ ಸಚಿವರು ಹಾಗೂ ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ವಿಜಯಾನಂದ ಎಸ್. ಕಾಶಪ್ಪನವರ ಅವರು ಭೀಮರಾಯ ಭಂಡಾರಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಿದರು.

ಪ್ರಶಸ್ತಿ ಪ್ರದಾನಕ್ಕೆ ಸಂತಸ ವ್ಯಕ್ತಪಡಿಸಿರುವ ಎಂ.ಆರ್.ಎಚ್.ಎಸ್. ರಾಯಚೂರು ಜಿಲ್ಲಾ ಅಧ್ಯಕ್ಷ ಹನುಮಂತಪ್ಪ



ಮನ್ನಾಪೂರಿ ಅವರು, ಭೀಮರಾಯ ಭಂಡಾರಿ ಅವರು ಸಾಹಿತ್ಯ, ಚಿಂತನೆ, ಹೋರಾಟ ಹಾಗೂ ಕಲಾ ಕ್ಷೇತ್ರಗಳಲ್ಲಿ ತಮ್ಮದೇ ಆದ ಛಾಪು ಮೂಡಿಸಿರುವ ಹಿರಿಯ ವ್ಯಕ್ತಿಯಾಗಿದ್ದಾರೆ. ಅವರ ಸರಳತೆ, ಮುಗ್ಧ ಮನಸ್ಸು ಹಾಗೂ ಬಹುಮುಖ ಪ್ರತಿಭೆ ಎಲ್ಲರ ಮೆಚ್ಚುಗೆಗೆ ಪಾತ್ರವಾಗಿದೆ ಎಂದು ಹರ್ಷ ವ್ಯಕ್ತಪಡಿಸಿದ್ದಾರೆ.

ದೇವರಗುಡ್ಡ ಗ್ರಾಮದ ಭೀಮರಾಯ ಭಂಡಾರಿ ಅವರ ಪ್ರತಿಭೆ ಹಾಗೂ ಸೇವೆಯನ್ನು ಗುರುತಿಸಿ ರಂಗ ಗೌರವ ಪ್ರಶಸ್ತಿಗೆ ಆಯ್ಕೆ ಮಾಡಿದ ಬಾಗಲಕೋಟೆ ಜಿಲ್ಲಾ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬಿ.ಪಿ. ದುತ್ತರಗಿ ಟ್ರಸ್ಟ್, ಸುಳೇಭಾವಿ ಸಂಸ್ಥೆಯ ಪದಾಧಿಕಾರಿಗಳು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧಿಕಾರಿಗಳಿಗೆ ಹನುಮಂತಪ್ಪ ಮನ್ನಾಪೂರಿ ಅವರು ಹೃತ್ಪೂರ್ವಕ ಅಭಿನಂದನೆ ಸಲ್ಲಿಸಿದ್ದಾರೆ.

ವರದಿ: ಖಾಜಾಹುಸೇನ್ ಬಾಬಾ, ಜಾಲಹಳ್ಳಿ*

ಸಾಹಿತ್ಯ ಸಿಂಚನ

ನವ ಕರ್ನಾಟಕ ಉದಯೋತ್ಸವ

ಕನ್ನಡಿಗರ ಹೃದಯಗಳು ಒಂದಾದ ಈ ಸಮಯ ।
ಸಿರಿಗನ್ನಡದ ಚೆಲುವಿನಲ್ಲಿ ಆಯಿತು ನವ ಕರ್ನಾಟಕದ
ಉದಯ ॥

ಕೆಚ್ಚೆದೆಯ ಕನ್ನಡಿಗರ ರಕ್ತದಲಿ ಸ್ವಾಭಿಮಾನವು ಉಕ್ಕಿ ಹ-
ರಿಯಿತು ।
ಹೋರಾಟಗಾರರ ಮನದಲಿ ಶುಭ ಪ್ರೇಮದ ಹೊಳೆಯು
ಹರಿಯಿತು ॥

ಹಳದಿ ಕುಂಕುಮದ ಬಣ್ಣವು ಬೆಳಗಿತು ಕನ್ನಡದ ಕೀರ್ತಿ ।
ಕಾವೇರಿಯಿಂದ ಕೃಷ್ಣೆಯ ತನಕ ಮಾರ್ದನಿಸಿತು
ಜಯಘೋಷದ ಕೀರ್ತಿ ॥

ಹೆಚ್ಚಿತು ಏಕೀಕರಣದ ಕಾವು ನಾಡು-ನುಡಿಯ
ಅಭಿಮಾನಿಗಳಲ್ಲಿ ।
ಹರಿದು ಹಂಚಿಹೋಗಿದ್ದ ಪ್ರಾಂತಗಳು ಒಂದಾದವು
ಕರ್ನಾಟಕದಲ್ಲಿ ॥

ದಶ ದಿಕ್ಕುಗಳಿಂದ ಹರಿದುಬಂದ ಕನ್ನಡದ ಪ್ರೀತಿಯ
ಮಹಾಪೂರ ।
ನವೆಂಬರ್ ಒಂದರ ಈ ಸುದಿನದಲಿ ಕಾಣಿಸಿತು ನವ
ನಾಡಿನ ಶೃಂಗಾರ ॥

ಕನ್ನಡ ತಾಯಿಯ ಮಡಿಲಲ್ಲಿದೆ ಎಲ್ಲರೂ ಒಂದೇ ಎಂಬ
ಭಾವ ।
ಜಾತಿ ಮತಗಳ ಭೇದವಿಲ್ಲದೆ ತೋರಿಸೋಣ ಜಗಕೆ
ಪ್ರೀತಿಯ ಭಾವ ॥

ಕನ್ನಡಿಗರೆಲ್ಲರೂ ಒಂದಾಗಿ ಕಟ್ಟೋಣ ಸುಂದರ ನಾಡನ್ನು ।
ಮುಂದಿನ ಪೀಳಿಗೆಗೆ ಮಾದರಿಯಾಗಿ ಉಳಿಸೋಣ
ತಾಯ್ನಾಡನ್ನು ॥

ಆರ್.ಜಿ.ಕಲಾ ಟ್ರಸ್ಟ್ ವತಿಯಿಂದ ಸಂಗೀತ ಗಾಯನ, ಧ್ವನಿ ಸುರುಳಿ ಬಿಡುಗಡೆ ಸಾಧಕರಿಗೆ ಸನ್ಮಾನ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಸಿಂಧನೂರಿನ ಆರ್.ಜಿ.ಕಲಾ ಟ್ರಸ್ಟ್ ವತಿಯಿಂದ ನವೆಂಬರ್ 5 ಗುರುವಾರದಂದು ನಗರದ ಅಂಬಾ ಭವಾನಿ ದೇವಸ್ಥಾನದ ಆವರಣದಲ್ಲಿ ಕನ್ನಡ ರಾಜ್ಯೋತ್ಸವದ ಪ್ರಯುಕ್ತ ಸಂಗೀತ ಗಾಯನ ಮತ್ತು ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ ಗೌರವಿಸಿ ಸನ್ಮಾನ ಮಾಡಲಾಯಿತು.

ಈ ಕಾರ್ಯಕ್ರಮದಲ್ಲಿ ಸುಮಾರು 40 ಜನ ಹವ್ಯಾಸಿ ಗಾಯಕ-



ರಿಂದ ಸಂಗೀತ ಗಾಯನ ಹಾಗೂ ಧ್ವನಿ ಸುರುಳಿ ಬಿಡುಗಡೆ ಮಾಡಿದರು. ನಂತರ ಮಾತನಾಡಿದ ಆರ್.ಜಿ.ಕಲಾ ಟ್ರಸ್ಟ್ ವೀರೇಶ ದೇವರಮನಿ, ಮುಖಂಡ ಶಿವನಗೌಡ ನಾಯಕ, ರಂಗಮ್ಮ ಗಲಗ ಮಾತನಾಡಿದರು ಮುಖ್ಯ ಅತಿಥಿಗಳಾಗಿ ಕಾರುಣ್ಯಾಶ್ರಮದ ಡಾ.ಚನ್ನಬಸವಯ್ಯಸ್ವಾಮಿ, ಸಿದ್ರಾಮೇಶ ಮನ್ನಾಪೂರು, ವೀರೇಶ ಭಾವಿಮನಿ, ಮಂಜುನಾಥ ಗಾಣಿಗೇರ, ಡಿ.ಎಚ್.ಕಂಬಳಿ, ಸೇರಿದಂತೆ ಮುಂತಾದ ಗಣ್ಯವಕ್ತಿಗಳು ವೇದಿಕೆ ಮೇಲಿದ್ದರು. ಈ ಸಂದರ್ಭದಲ್ಲಿ ಕರವೇ ತಾಲೂಕು ಅಧ್ಯಕ್ಷ ವೀರೇಶ ಭಾವಿಮನಿ, ಲಕ್ಷ್ಮಿ ಪತ್ತಾರ್, ಹುಸೇನಪ್ಪ ಪೂಜಾರಿ, ಮಹೇಶ, ಅಮರೇಶ, ಈಶ್ವರ್, ಸೇರಿದಂತೆ ಅನೇಕ ಗಾಯಕರು ಪಾಲ್ಗೊಂಡಿದ್ದರು.

ಇಂದು ತಾಳಿಕೋಟಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ

❑ ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ಪಟ್ಟಣದ 110/11 ಕೆ.ವಿ. ವಿದ್ಯುತ್ ಉಪಕೇಂದ್ರದಿಂದ ಹೊರಹೋಗುವ 11 ಕೆ.ವಿ. ತಾಳಿಕೋಟಿ ಪಟ್ಟಣ ಮಾರ್ಗಕ್ಕೆ ಹೆಚ್ಚುವರಿ ಫೀಡರ್ ನಿರ್ಮಾಣ ಹಾಗೂ ನಿರ್ವಹಣಾ ಕಾಮಗಾರಿಗಳನ್ನು ಕೈಗೊಳ್ಳುವ ಹಿನ್ನೆಲೆಯಲ್ಲಿ ಇಂದು (ನ. 6) ಶುಕ್ರವಾರ ಬೆಳಿಗ್ಗೆ 10ರಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ.

ಈ ಅವಧಿಯಲ್ಲಿ ತಾಳಿಕೋಟಿ ಪಟ್ಟಣ ಸೇರಿದಂತೆ ತಾಲೂಕಿನ ತುಂಬಗಿ, ಬೊಮ್ಮನಹಳ್ಳಿ, ಬಳಗಾನೂರ, ತಮದಡ್ಡಿ, ಹಿರೂರ, ಬಿ. ಸಾಲವಾಡಗಿ, ಮಟಕದೇವನಹಳ್ಳಿ, ಕಾರಗನೂರ, ಬೇಲೂರ, ಮಾಳೂರ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ಪೂರೈಕೆ ಸ್ಥಗಿತಗೊಳ್ಳಲಿದೆ. ಅಲ್ಲದೆ, ಮಾಳೂರ ಕುಡಿಯುವ ನೀರಿನ ಘಟಕ ಹಾಗೂ ಎಲ್ಲಾ ಐಪಿ ಸೆಟ್‌ಗಳಿಗೂ ವಿದ್ಯುತ್ ವ್ಯತ್ಯಯ ಉಂಟಾಗಲಿದೆ. ಆದ್ದರಿಂದ ತಾಳಿಕೋಟಿ ಪಟ್ಟಣ ಹಾಗೂ ಸುತ್ತಮುತ್ತಲಿನ ಗ್ರಾಮಗಳ ವಿದ್ಯುತ್ ಗ್ರಾಹಕರು ಸಹಕರಿಸಬೇಕೆಂದು ಹೆಸ್ಕಾಂನ ತಾಳಿಕೋಟಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ರಾಜಶೇಖರ ಹಾದಿಮನಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಚ್ ಅಂಡ್ ವಿ ಅಡ್ವಾನ್ಸಡ್ ಮೆಟೀರಿಯಲ್ಸ್ ಕಂಪನಿಯ ನೌಕರನನ್ನು ಮತ್ತೆ ಕೆಲಸಕ್ಕೆ ನವಂಬರ್ 20ರ ಒಳಗೆ ತೆಗೆದುಕೊಂಡು ಕಾಯಂ ಉದ್ಯೋಗ

ನೀಡಬೇಕು ಇಲ್ಲವಾದರೆ ಹೋರಾಟದ ಎಚ್ಚರಿಕೆ

❑ ನೈಜ್ಯ ದೆಸೆ ನ್ಯೂಸ್

ತಾಂಡವಪುರ: ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ಮೈಸೂರು ಊಟಿ ರಸ್ತೆ ಕೆಎನ್ ಹುಂಡಿ ಗ್ರಾಮದ ಬಳಿ ಇರುವಎಚ್ ಅಂಡ್ ವಿ ಅಡ್ವಾನ್ಸಡ್ ಮೆಟೀರಿಯಲ್ಸ್ ಕಂಪನಿಯ ನೌಕರನನ್ನು ಯಾವುದೇ ತಪ್ಪು ಮಾಡದೆ ಇರುವ ನೌಕರನನ್ನು ಏಕಾಏಕಿ ಕೆಲಸದಿಂದ ನಿಲ್ಲಿಸಿ ಆತನ ಕುಟುಂಬದ ವರ್ಗದವರ ಹೊಟ್ಟೆಯ ಮೇಲೆ ಬರೆ ಎಳೆಯುತ್ತಿರುವ ಕಂಪನಿಯವರು ಮತ್ತೆ ಕೆಲಸಕ್ಕೆ ನವಂಬರ್ 20ರ ಒಳಗೆ ತೆಗೆದುಕೊಂಡು ಕಾಯಂ ಉದ್ಯೋಗ ನೀಡಬೇಕು ಇಲ್ಲವಾದರೆ ಕಂಪನಿ ಮುಂದೆ ಉಗ್ರವಾದ ಹೋರಾಟ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಮುಖಂಡರ ಎಚ್ಚರಿಕೆ ನೀಡಿದ್ದಾರೆ.

ಗ್ರಾಮದ ನೌಕರನನ್ನು ಬೆಂಬಲಿಸಿ ಗ್ರಾಮಸ್ಥರು ಮತ್ತು ರೈತ ಸಂಘದ ಮುಖಂಡರು ಕಂಪನಿ ಮುಂದೆ ಸಾಂಕೇತಿಕವಾಗಿ ಪ್ರತಿಭಟನೆ ಚಳುವಳಿ ಹಮ್ಮಿಕೊಂಡು ಪೊಲೀಸರ ಮಧ್ಯಸ್ಥಿಕೆಯಲ್ಲಿ ಇಂದು ನಡೆದ ಕಂಪನಿ ಅಳಿದು ವರ್ಗ ಮತ್ತು ಮುಖಂಡರ ನಡುವೆ ನಡೆದ ಸಭೆಯಲ್ಲಿ ಆಳಿತು ವರ್ಗದವರು ನಮ್ಮ



ಕಂಪನಿಯ ಮಾಲೀಕರ ಜೊತೆ ಈ ಬಗ್ಗೆ ಚರ್ಚೆ ಮಾಡಿ ಇದಕ್ಕೆ 20ನೇ ತಾರೀಖಿನೊಳಗೆ ನಾವು ನಿಮಗೆ ತಿಳಿಸುತ್ತೇವೆ ಎಂದು ಹೇಳಿದರು ಇದಕ್ಕೆ ಪೊಲೀಸರು ಮತ್ತು ಗ್ರಾಮಸ್ಥರ ನಡುವೆ ಮಾತುಕತೆ ನಡೆದು ಇದೇ ತಿಂಗಳು 20ರ ಒಳಗೆ ನಿಲ್ಲಿಸಿರುವ ನೌಕರರನ್ನು ಮತ್ತೆ ಕೆಲಸಕ್ಕೆ ತೆಗೆದುಕೊಳ್ಳುವ ಆತನಿಗೆ ಕಾಯಂ ಉದ್ಯೋಗ ನೀಡಬೇಕು ಆತನು ಸುಮಾರು 18 ವರ್ಷಗಳಿಂದ ಕಂಪನಿಯಲ್ಲಿ ಉದ್ಯೋಗ ಮಾಡಿಕೊಂಡು ಜೀವನ ಸಾಗಿಸುತ್ತಾ ಬಂದಿದ್ದಾನೆ.

ಇವನು ಸೇರಿದ ಮೇಲೆ ಬಂದಂತ ನೌಕರರನ್ನು ಖಾಯಂ ಆಗಿ ಮಾಡಿಕೊಂಡಿದ್ದಾರೆ ಆದರೆ ಈತನು 18 ವರ್ಷಗಳಿಂದ ಕಂಪನಿಯಲ್ಲಿ ಯಾವುದೇ ಕಪ್ಪು ಚುಕ್ಕೆ ಇರಲಿ ಕೆಲಸ ಮಾಡಿಕೊಂಡು ಬರುತ್ತಿದ್ದರು ಸಹ ಈತನನ್ನು ಕಾಯಂ ನೌಕರನಾಗಿ ಮಾಡಬೇಕಾಗುತ್ತದೆ ಎಂದು ಆತನಿಗೆ ಒಂದು ವರ್ಷ ಎರಡು ವರ್ಷ ಟ್ರೈನಿಂಗ್ ಲೆಟರ್ ನೀಡಿ ಮತ್ತೆ ಆತನ ಕೆಲಸದಿಂದ ನಿಲ್ಲಿಸಿ ಮತ್ತೆ ತೆಗೆದುಕೊಳ್ಳುವ ರೀತಿಯಲ್ಲಿ ಕಳೆದ 18 ವರ್ಷಗಳಿಂದಲೂ ಸಹ ಕಂಪನಿಯವರು ಈ ರೀತಿ ಮಾಡಿಕೊಂಡು ಬರುತ್ತಿದ್ದು ಈ ಬಗ್ಗೆ ಗ್ರಾಮದ ಕಾಂಗ್ರೆಸ್ ಮುಖಂಡ ರವಿಗೌಡ ರವರು ಈ ಹಿಂದೆ ಈ ವಿಚಾರವಾಗಿ ಕಂಪನಿ ಆಡಳಿತ ಮಂಡಳಿ ಜೊತೆ ಮಾತುಕತೆ ನಡಿಸಿ ಇನ್ನು ಮುಂದೆ ಈ ರೀತಿ ಮಾಡುವುದಿಲ್ಲ.

ಅವರಿಗೆ ಕಾಯೋದ್ಯೋಗ ನೀಡುವುದಾಗಿ ಭರವಸೆ ನೀಡಿದರು ಆದರೆ ಈಗ ಗ್ರಾಮದ ಬಡ ಕುಟುಂಬದ ಮಹೇಶ್ ನೌಕರನನ್ನು ಏಕಏಕಿ ನಿಲ್ಲಿಸಿರುವುದು ಖಂಡನೀಯ ಮತ್ತೆ ಈತನನ್ನು ಕೆಲಸಕ್ಕೆ ತೆಗೆದುಕೊಳ್ಳಬೇಕು ಕಾಯಮು ಉದ್ಯೋಗ ನೀಡಬೇಕೆಂದು ಒತ್ತಾಯ ಮಾಡಿರುವ ರವಿಗೌಡರು ಒಂದು ವೇಳೆ ಕೆಲಸ ನೀಡಲು ನಿರಾಕರಿಸಿದರೆ ನೌಕರರ ಬೆಂಬಲಕ್ಕೆ ರೈತ ಸಂಘದ ಜೊತೆಗೂಡಿ ಗ್ರಾಮಸ್ಥರು ಮುಖಂಡರು ಕಂಪನಿಯ ಮುಂದೆ ಉಗ್ರವಾದ ಹೋರಾಟವನ್ನು ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಎಚ್ಚ-ರಿಕೆ ನೀಡಿರುವ ಮುಖಂಡರು ಹೋರಾಟಕ್ಕೆ ಆಸ್ಪದ ನೀಡದೆ ನಿಲ್ಲಿಸಿರುವ ನೌಕರರನ್ನು ಮತ್ತೆ ಕೆಲಸಕ್ಕೆ ತೆಗೆದುಕೊಂಡು ಕಾಯಂ ಉದ್ಯೋಗ ನೀಡುವಂತೆ ಮುಖಂಡರು ಮನವಿ ಮಾಡಿದರು ಈ ಪ್ರತಿಭಟನೆಯಲ್ಲಿ ಗ್ರಾಮದ ಮುಖಂಡರು.

ಕಾಂಗ್ರೆಸ್ ಮುಖಂಡರು ಆದ ರವಿಗೌಡ, ಕಡಕೊಳ ಹಾಲು ಉತ್ಪಾದಕ ಸಹಕಾರ ಸಂಘದ ಅಧ್ಯಕ್ಷರಾದ ಬೀರೇಶ್, ಮುಖಂಡರಾದ ಕೆ ಎಸ್. ಚಂದ್ರು, ಪೈಲ್ವಾನ್ ರಮೇಶ್, ಮುಖಂಡರಾದ ಝಮೀರ್ ಅಹಮದ್, ಯಜಮಾನರಾದ ತೇರ್ತಿಗೌಡರು, ನಾಗಣ್ಣ ಕರಿಯಪ್ಪ, ರೈತ ಸಂಘದ ಮುಖಂಡ ಇಮ್ಮಾವುರಘು. ಟಗರು ರವಿ ಹಾಗೂ ಮುಂತಾದವರು ಪ್ರತಿಭಟನೆಯಲ್ಲಿ ಭಾಗಿಯಾಗಿ ಬೆಂಬಲ ವ್ಯಕ್ತಪಡಿಸಿದರು

ಬಳ್ಳಾರಿ: ಸಿಬಿ ಆರ್‌ಸೆಟಿಯಿಂದ ಉಚಿತ 'ಕೃಷಿ ಉದ್ಯಮಿ' ತರಬೇತಿಗೆ ಚಾಲನೆ



❑ ನೈಜ್ಯ ದೆಸೆ ನ್ಯೂಸ್

ಸಮಗ್ರ ಕೃಷಿ ಪದ್ಧತಿಯಿಂದ ಆರ್ಥಿಕ ಪ್ರಗತಿ ಸಾಧ್ಯ: ಡಾ. ಸದಾಶಿವ ಉಪ್ಪಾರ

ಬಳ್ಳಾರಿ: ರೈತರು ಕೇವಲ ಸಾಂಪ್ರದಾಯಿಕ ಕೃಷಿಗೆ ಸೀಮಿತವಾಗದೆ ಹೈನುಗಾರಿಕೆ, ಕೋಳಿ ಸಾಕಾಣಿಕೆ ಹಾಗೂ ಎರೆಹುಳು ಗೊಬ್ಬರ ತಯಾರಿಕೆಯಂತಹ ಪೂರಕ ಚಟುವಟಿಕೆಗಳನ್ನು ಒಳಗೊಂಡ ಸಮಗ್ರ ಕೃಷಿ ಪದ್ಧತಿಯನ್ನು ಅಳವಡಿಸಿಕೊಂಡಾಗ ಮಾತ್ರ ಆರ್ಥಿಕವಾಗಿ ಸದೃಢರಾಗಲು ಸಾಧ್ಯ ಎಂದು ಪಶು ಸಂಗೋಪನಾ ಇಲಾಖೆಯ ಉಪ ನಿರ್ದೇಶಕ ಡಾ. ಸದಾಶಿವ ಉಪ್ಪಾರ ಹೇಳಿದರು.

ನಗರದ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆ (ಸಿಬಿ ಆರ್‌ಸೆಟಿ) ಆವರಣದಲ್ಲಿ ಹಮ್ಮಿಕೊಳ್ಳಲಾಗಿರುವ 13 ದಿನಗಳ ಉಚಿತ 'ಕೃಷಿ ಉದ್ಯಮಿ' ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ತಾಲೂಕು ಮಟ್ಟದಲ್ಲಿ ಪಶು ಸಂಗೋಪನಾ ಇಲಾಖೆಯಿಂದ ಸಿಗುವ ವಿವಿಧ ಸೌಲಭ್ಯಗಳು ಮತ್ತು ಯೋಜನೆಗಳನ್ನು ರೈತರು ಸದುಪಯೋಗಪಡಿಸಿಕೊಳ್ಳಬೇಕು ಎಂದು ಅವರು ಇದೇ ವೇಳೆ ಕರೆ ನೀಡಿದರು. ಸಂಸ್ಥೆಯ ನಿರ್ದೇಶಕ ವಿನಯ್ ಕುಮಾರ್ ಬಿ. ಕೊಳ್ಳೂರುಮಠ ಮಾತನಾಡಿ, "ನಮ್ಮ ಸಂಸ್ಥೆಯಲ್ಲಿ ಕೃಷಿ ತಾಂತ್ರಿಕತೆಯ ಜೊತೆಗೆ ಶಿಬಿರಾರ್ಥಿಗಳಿಗೆ ವ್ಯಕ್ತಿತ್ವ ವಿಕಸನ, ಆತ್ಮವಿಶ್ವಾಸ ವೃದ್ಧಿ ಹಾಗೂ ಸಂವಹನ ಕೌಶಲ್ಯಗಳ ತರಬೇತಿಯನ್ನು ನೀಡಲಾಗುತ್ತದೆ.

ಇದು ಅವರು ವೃತ್ತಿ ಜೀವನದಲ್ಲಿ ಯಶಸ್ವಿಯಾಗಿ ಮುನ್ನಡೆಯಲು ಸಹಕಾರಿಯಾಗಲಿದೆ" ಎಂದರು. ಕೆನರಾ ಬ್ಯಾಂಕ್‌ನ ಜಿಲ್ಲಾ ಲೀಡ್ ವ್ಯವಸ್ಥಾಪಕ ಗಿರೀಶ್ ವಿ. ಕುಲಕರ್ಣಿ ಅವರು ಕೃಷಿ ಮತ್ತು ಸ್ವ-ಉದ್ಯೋಗ ಕೈಗೊಳ್ಳಲು ವಿವಿಧ ಬ್ಯಾಂಕ್‌ಗಳಲ್ಲಿ ಲಭ್ಯವಿರುವ ಸಾಲ ಸೌಲಭ್ಯಗಳು ಹಾಗೂ ಆರ್ಥಿಕ ನೆರವಿನ ಕು-ರಿತು ವಿಸ್ತೃತ ಮಾಹಿತಿ ಹಂಚಿಕೊಂಡರು. ಕಾರ್ಯಕ್ರಮದಲ್ಲಿ ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕ ರಾಜೇಂದ್ರ, ಜಿಲ್ಲಾ ಪಂಚಾಯತ್ ಎನ್‌ಆರ್‌ಎಲ್‌ಎಂ ಸಿಬ್ಬಂದಿ, ಉಪನ್ಯಾಸಕರಾದ ಜಡೆಪ್ಪ, ಸಿದ್ದಲಿಂಗಮ್ಮ, ಸಂತೋಷ್ ಕುಮಾರ್, ಪರಮೇಶ ಉಪಸ್ಥಿತರಿದ್ದರು. ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿರುವ 35 ಶಿಬಿರಾರ್ಥಿಗಳು ಈ ಉಚಿತ ವಸತಿ ಸಹಿತ ತರಬೇತಿಯಲ್ಲಿ ಪಾಲ್ಗೊಂಡಿದ್ದಾರೆ.

ವರದಿ: ಜಿಲಾನಸಾಬ್ ಬಡಿಗೇರ್

ಆರ್.ಎಸ್. ಪಾಟೀಲ ಕೂಚಬಾಳ ಅವರ 54ನೇ ಜನ್ಮದಿನದ ಅಂಗವಾಗಿ ವಿವಿಧ ಸೇವಾ ಕಾರ್ಯಕ್ರಮಗಳು

❑ ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ವಿಜಯಪುರ ಜಿಲ್ಲೆಯ ಮಾಜಿ ಬಿಜೆಪಿ ಜಿಲ್ಲಾಧ್ಯಕ್ಷ ಹಾಗೂ ಜನನಾಯಕ ಆರ್.ಎಸ್. ಪಾಟೀಲ ಕೂಚಬಾಳ ಅವರ 54ನೇ ಜನ್ಮದಿನದ ಅಂಗವಾಗಿ ಅಭಿಮಾನಿಗಳ ವತಿಯಿಂದ ವಿವಿಧ ಸಾಮಾಜಿಕ ಹಾಗೂ ಸೇವಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಯಿತು.

ಈ ಪ್ರಯುಕ್ತ ಇಂದು ಬೆಳಿಗ್ಗೆ ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿಗಳ ಸನ್ನಿಧಿಯಲ್ಲಿ ಗೋದಾನ, ಮೇವು ದಾನ ಹಾಗೂ ಸಂಕಲ್ಪ ಸೇವೆ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಬಸನಗೌಡ ಮಾಲಿಪಾಟೀಲ, ನಾಗರಾಜ ಬಳಗಾರ, ಕಿಶೋರ್



ಬಡಿಗೇರ, ಕಾಶಿನಾಥ ಗಾಯಕವಾಡ ಸೇ-ರಿದಂತೆ ಹಲವರು ಉಪಸ್ಥಿತರಿದ್ದರು. ಬೆಂಗಳೂರಿನ ನಾಗರಬಾವಿಯ ಶ್ರೀ ಸರಸ್ವತಿ ಅನಾಥ ಬಾಲ ಆಶ್ರಮದಲ್ಲಿ ಮಕ್ಕಳಿಗೆ ಉಪಾಹಾರ ವಿತರಿಸುವ ಮೂಲಕ ಸೇವೆ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಅನಿಲ ಕಳಸನ್ನವರ, ಪ್ರಕಾಶ ಪಾಟೀಲ, ಶಿವರಾಜ್ ಬಿರಾದಾರ, ಭೀಮನಗೌಡ ಟಕ್ಕಳಕಿ, ಮುತ್ತು ಟಕ್ಕಳಕಿ ಸೇ-ರಿದಂತೆ ಅಭಿಮಾನಿಗಳು ಉಪಸ್ಥಿತರಿದ್ದರು.

ಅದೇ ರೀತಿ ಶ್ರೀ ಸಂಕಲ್ಪ ಅನಾಥ ಸೇವಾ ನಿರಾಶ್ರಿತರ ಆಶ್ರಮ ಹಾಗೂ ಯಾದಗಿರಿ ಆಶ್ರಮದಲ್ಲಿ ಪ್ರಸಾದ ಸೇವೆ ನೆರವೇರಿಸಲಾಯಿತು. ಈ ಸಂದರ್ಭದಲ್ಲಿ ಶರಣಗೌಡ ಪಾಟೀಲ ಕನ್ಯಾಕೋಳೂರು, ಮಲ್ಲನಗೌಡ ಪಾಟೀಲ, ಶಿವಾಜಿ ಶಹಾಪುರ, ಸಂತೋಷ ಗಾಯಕವಾಡ ಸೇರಿದಂತೆ ಹಲವರು ಭಾಗವಹಿಸಿದ್ದರು. ಮಸ್ಕಿಯ ಅಭಿನಂದನ ಸ್ಫೂರ್ತಿಧಾಮದಲ್ಲಿ ಒಂದು ದಿನದ ದಾಸೋಹ ಸೇವೆ ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಬಸನಗೌಡ ಮಾಲಿಪಾಟೀಲ, ನಾಗರಾಜ ಬಳಗಾರ, ಕಿಶೋರ್ ಬಡಿಗೇರ, ಕಾಶಿನಾಥ ಗಾಯಕವಾಡ, ಸಂತೋಷ ಗಾಯಕವಾಡ, ಮುನ್ನಾ ಠಾಕೂರು, ಶಿವು ದಡ್ಡಿ ಸೇರಿದಂತೆ ಅನೇಕ ಅಭಿಮಾನಿಗಳು ಉಪಸ್ಥಿತರಿದ್ದರು.

ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಯಶಸ್ಸಿನ ದಾರಿ ತೋರಿದ ಆಂಜನೇಯ ನಸಲಾಪುರ

❑ ನೈಜ್ಯ ದೆಸೆ ನ್ಯೂಸ್

ಮಾನ್ವಿ: ಶಿಕ್ಷಣವೆಂದರೆ ಕೇವಲ ಪರೀಕ್ಷೆಯಲ್ಲಿ ಹೆಚ್ಚಿನ ಅಂಕಗಳನ್ನು ಗಳಿಸುವುದಲ್ಲ. ಜ್ಞಾನ ಶಿಸ್ತು ಸಮಯಪ್ರಜ್ಞೆ ಆತ್ಮವಿಶ್ವಾಸ ನಿರಂತರ ಪರಿಶ್ರಮ ಹಾಗೂ ಉತ್ತಮ ನೈತಿಕ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದೇ ನಿಜವಾದ ಶಿಕ್ಷಣದ ಉದ್ದೇಶವಾಗಿದೆ ಎಂದು ಶ್ರೀ ವೆಂಕಟೇಶ್ವರ ಪದವಿ ಕಾಲೇಜಿನ ಪ್ರಾಂಶುಪಾಲರಾದ ಆಂಜನೇಯ ನಸಲಾಪುರ ಹೇಳಿದರು.

ಅವರು ಪಟ್ಟಣದ ಲೊಯೋಲ ಶಾಲೆಯಲ್ಲಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ



ಶೈಕ್ಷಣಿಕ ಸಾಧನೆ ಹಾಗೂ ಸರ್ವತೋಮುಖ ವ್ಯಕ್ತಿತ್ವ ವಿಕಸನದ ಉದ್ದೇಶದಿಂದ ಹಮ್ಮಿಕೊಂಡಿದ್ದ ಒಂದು ದಿನದ ಜೀವನ ಕೌಶಲ್ಯ ಮತ್ತು ವ್ಯಕ್ತಿತ್ವ ವಿಕಸನ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿ ಮಾತನಾಡಿದರು.

ಎಸ್‌ಎಸ್‌ಎಲ್‌ಸಿ ಪರೀಕ್ಷೆಯು ವಿದ್ಯಾರ್ಥಿಗಳ ಭವಿಷ್ಯಕ್ಕೆ ಮಹತ್ವದ ಹಂತವಾಗಿದ್ದು ಪರೀಕ್ಷೆಯನ್ನು ಭಯದಿಂದಲ್ಲ ಆತ್ಮವಿಶ್ವಾಸದಿಂದ ಎದುರಿಸಬೇಕು. ಯೋಜಿತ ಅಧ್ಯಯನ ನಿಯಮಿತ ಪುನರಾವರ್ತನೆ ಏಕಾಗ್ರತೆ ಹಾಗೂ ಸಕಾರಾತ್ಮಕ ಚಿಂತನೆಯೊಂದಿಗೆ ಸಿದ್ಧತೆ ನಡೆಸಿದರೆ ಉತ್ತಮ ಫಲಿತಾಂಶ ಸಾಧಿಸಲು ಸಾಧ್ಯ. ಮುಂದಿನ ಶಿಕ್ಷಣ ಮತ್ತು ವೃತ್ತಿಯನ್ನು ಆಯ್ಕೆ ಮಾಡುವಾಗ ತಮ್ಮ ಆಸಕ್ತಿ ಸಾಮರ್ಥ್ಯ ಹಾಗೂ ಗುರಿಗೆ ಅನುಗುಣವಾಗಿ ಸರಿಯಾದ ನಿರ್ಧಾರ ಕೈಗೊಳ್ಳಬೇಕು ಎಂದು ಸಲಹೆ ನೀಡಿದರು.

ಜೀವನದಲ್ಲಿ ಎದುರಾಗುವ ಸವಾಲುಗಳನ್ನು ಧೈರ್ಯದಿಂದ ಸ್ವೀಕರಿಸಿ ಸ್ಪಷ್ಟ ಗುರಿಯೊಂದಿಗೆ ಶಿಸ್ತು ಮತ್ತು ಪರಿಶ್ರಮವನ್ನು ಜೀವನದ ಭಾಗವಾಗಿಸಿಕೊಂಡರೆ ಯಶಸ್ಸು ಖಚಿತ ಎಂದು ವಿದ್ಯಾರ್ಥಿಗಳಿಗೆ ಆತ್ಮವಿಶ್ವಾಸ ತುಂಬಿದರು. ಈ ಸಂದರ್ಭದಲ್ಲಿ ಶಾಲೆಯ ನಿರ್ದೇಶಕರಾದ ಫಾ. ಸಿರಿಲ್ ರಾಜ್ ಮುಖ್ಯೋಪಾಧ್ಯಾಯಿನಿ ಸಿಸ್ಟರ್ ಜೂಲಿಯೇಟ್ ಸಹಾಯಕ ಮುಖ್ಯೋಪಾಧ್ಯಾಯ ಡೇವಿಡ್ ಕುಮಾರ್ ರವೀಂದ್ರ ಜಾನೇಕಲ್ ಶಿಕ್ಷಕ ವೃಂದ ಹಾಗೂ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಎಐಡಿವೈಒ 4ನೇ ಅಖಿಲ ಭಾರತ ಯುವಜನ ಸಮ್ಮೇಳನ ಯಶಸ್ವಿಗೊಳಿಸಿ: ಶರಣಪ್ಪ ಉದ್ಬಾಳ್

ನಿರುದ್ಯೋಗ, ಪ್ರಶ್ನೆಪತ್ರಿಕೆ ಸೋರಿಕೆ, ಅಕ್ರಮ ನೇಮಕಾತಿ ಹಾಗೂ ಮಹಿಳೆಯರ ಮೇಲಿನ ದೌರ್ಜನ್ಯಗಳ ವಿರುದ್ಧ ಯುವಜನತೆ ಸಂಘಟಿತರಾಗಲಿ

❑ ನೈಜ್ಯ ದೆಸೆ ನ್ಯೂಸ್

ರಾಜಸ್ಥಾನದ: ಜೈಪುರದಲ್ಲಿ ನವೆಂಬರ್ 27, 28 ಮತ್ತು 29ರಂದು ನಡೆಯಲಿರುವ ಎಐಡಿವೈಒ (AIDYO) 4ನೇ ಅಖಿಲ ಭಾರತ ಯುವಜನ ಸಮ್ಮೇಳನವನ್ನು ಯಶಸ್ವಿಗೊಳಿಸುವಂತೆ ಸಂಘಟನೆಯ ರಾಜ್ಯಾಧ್ಯಕ್ಷ ಶರಣಪ್ಪ ಉದ್ಬಾಳ್ ಕರೆ ನೀಡಿದರು. ಸಮ್ಮೇಳನದ ಅಂಗವಾಗಿ ನಿರುದ್ಯೋಗ, ಪ್ರಶ್ನೆಪತ್ರಿಕೆ ಸೋರಿಕೆ, ಅಕ್ರಮ ನೇಮಕಾತಿ, ಮಹಿಳೆಯರ ಮೇಲಿನ ದೌರ್ಜನ್ಯ ಹಾಗೂ ಆನ್‌ಲೈನ್ ಬೆಟ್ಟಿಂಗ್ ಹಾವಳಿಯನ್ನು ವಿರೋಧಿಸುವ ಪೋಸ್ಟರ್‌ಗಳನ್ನು ಸಂಘಟನೆಯ ಕಚೇರಿಯಲ್ಲಿ ಬಿಡುಗಡೆ ಮಾಡಿ ಅವರು ಮಾತನಾಡಿದರು.

ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ಇಲಾಖೆಗಳಲ್ಲಿ ಲಕ್ಷಾಂತರ ಹುದ್ದೆಗಳು ಖಾಲಿ ಇದ್ದರೂ ಅವುಗಳನ್ನು ಭರ್ತಿ ಮಾಡುತ್ತಿಲ್ಲ.



ಅಪರೂಪಕ್ಕೆ ನಡೆಯುವ ನೇಮಕಾತಿಗಳಲ್ಲಿಯೂ ಪರೀಕ್ಷಾ ಅಕ್ರಮ, ಪ್ರಶ್ನೆಪತ್ರಿಕೆ ಸೋರಿಕೆ, ಭ್ರಷ್ಟಾಚಾರ ಸೇರಿದಂತೆ ಹಲವು ಗಂಭೀರ ಸಮಸ್ಯೆಗಳು ಎದುರಾಗುತ್ತಿವೆ. ಇದರಿಂದ ಸ್ಪರ್ಧಾತ್ಮಕ ಪರೀಕ್ಷೆಗಳು ರದ್ದಾಗುತ್ತಿದ್ದು, ಉದ್ಯೋಗದ ನಿರೀಕ್ಷೆಯಲ್ಲಿರುವ ಯುವಜನರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಆತಂಕ ವ್ಯಕ್ತಪಡಿಸಿದರು.

ಇನ್ನೊಂದೆಡೆ ಮಾದಕ ವ್ಯಸನ, ಮಹಿಳೆಯರು ಮತ್ತು ಬಾಲಕಿಯರ ಮೇಲಿನ ದೌರ್ಜನ್ಯಗಳು ನಿರಂತರವಾಗಿ ಹೆಚ್ಚುತ್ತಿವೆ. ಆನ್‌ಲೈನ್ ಗೇಮಿಂಗ್ ಮತ್ತು ಬೆಟ್ಟಿಂಗ್ ಹಾವಳಿಯಿಂದ ಯುವಜನರ ಬದುಕು ಹಾಳಾಗುತ್ತಿದ್ದು, ಆತ್ಮಹತ್ಯೆಯಂತಹ ದುರಂತ ಘಟನೆಗಳೂ ನಡೆಯುತ್ತಿವೆ. ಇಂತಹ ಸಾಮಾಜಿಕ ಪಿಡುಗುಗಳ ವಿರುದ್ಧ ಯುವಜನತೆ ಸಂಘಟಿತರಾಗಿ ಹೋರಾಟಕ್ಕೆ ಮುಂದಾಗಬೇಕು ಎಂದು ಕರೆ ನೀಡಿದರು.

ಸಮ್ಮೇಳನದ ಗಣ್ಯರು ಜೈಪುರದಲ್ಲಿ ನಡೆಯಲಿರುವ ಈ ಸಮ್ಮೇಳನವನ್ನು ಖ್ಯಾತ ಆರ್ಥಿಕ ತಜ್ಞರು ಹಾಗೂ ಜೆಎನ್‌ಯು ವಿಶ್ವವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕರಾದ ಅರುಣ್ ಕುಮಾರ್ ಉದ್ಘಾಟಿಸಲಿದ್ದಾರೆ. ಮುಖ್ಯ ಭಾಷಣ-ಕಾರರಾಗಿ ಎಸ್‌ಯುಸಿಐ (ಕಮ್ಯುನಿಸ್ಟ್) ಪಕ್ಷದ ಕೇಂದ್ರ ಸಮಿತಿ ಸದಸ್ಯ ಅರುಣ್ ಸಿಂಗ್ ಭಾಗವಹಿಸಲಿದ್ದಾರೆ. ಎಐಡಿವೈಒ ಪ್ರಧಾನ ಕಾರ್ಯದರ್ಶಿ ಅಮರ್ಜಿತ್ ಕುಮಾರ್ ಭಾಷಣ ಮಾಡಲಿದ್ದಾರೆ.

ಬಹಿರಂಗ ಅಧಿವೇಶನದ ಅಧ್ಯಕ್ಷತೆಯನ್ನು ಅಖಿಲ ಭಾರತ ಅಧ್ಯಕ್ಷ ನಿರಂಜನ್ ನಮಸ್ಕಾರ್ ವಹಿಸಲಿದ್ದು, ಸಮಾರೋಪ ಭಾಷಣವನ್ನು ಎಸ್‌ಯುಸಿಐ (ಕಮ್ಯುನಿಸ್ಟ್) ಪಕ್ಷದ ಪ್ರಧಾನ ಕಾರ್ಯದರ್ಶಿ ಕಾಮ್ರೇಡ್ ಪ್ರವಾಷ್ ಘೋಷ್ ನೆರವೇರಿಸಲಿದ್ದಾರೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಎಐಡಿವೈಒ ಜಿಲ್ಲಾ ಅಧ್ಯಕ್ಷ ಚನ್ನಬಸವ ಜಾನೇಕಲ್ ಮಾತನಾಡಿ, ಯುವಜನ ಸಮ್ಮೇಳನದ ಪೂರ್ವಭಾವಿಯಾಗಿ ಜಿಲ್ಲೆಯಾದ್ಯಂತ ಯುವಜನರ ಗುಂಪು ಚರ್ಚೆಗಳು, ಸದಸ್ಯತ್ವ ಅಭಿಯಾನ, ಸಂಘಟನೆಯ ಘಟಕ ರಚನೆ ಸೇ-ರಿದಂತೆ ವಿವಿಧ ರೀತಿಯ ಪ್ರಚಾರ ಕಾರ್ಯಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯದರ್ಶಿ ವಿನೋದ್, ಸಂದೀಪ್ ಗೌಡ, ಶಿವಪ್ಪ ಅಸ್ಕಿಹಾಳ್, ಅಶೋಕ್ ಪೂಜಾರಿ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

ನೇಮಕಾತಿ ಪ್ರಕಟಣೆ

ಇಂಡಿಯನ್ ಬ್ಯಾಂಕ್ ನೇಮಕಾತಿ 2026 – 1500 ಅಪ್ರೆಂಟಿಸ್ (Apprentice) ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಇಂಡಿಯನ್ ಬ್ಯಾಂಕ್ ನೇಮಕಾತಿ 2026: 1500 ಅಪ್ರೆಂಟಿಸ್ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಇಂಡಿಯನ್ ಬ್ಯಾಂಕ್ ತನ್ನ ನವೆಂಬರ್ 2026ರ ಅಧಿಕೃತ ಅಧಿಸೂಚನೆಯ ಮೂಲಕ, ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅಪ್ರೆಂಟಿಸ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಜಿಗಳನ್ನು ಕೋರಿದೆ. ಅಖಿಲ ಭಾರತ ಮಟ್ಟದಲ್ಲಿ ಸರ್ಕಾರಿ ವಲಯದಲ್ಲಿ ವೃತ್ತಿಜೀವನವನ್ನು ರೂಪಿಸಿಕೊಳ್ಳಲು ಬಯಸುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 25-ನವೆಂಬರ್-2026 ರಂದು ಅಥವಾ ಅದಕ್ಕೂ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಸಂಸ್ಥೆಯ ಹೆಸರು: ಇಂಡಿಯನ್ ಬ್ಯಾಂಕ್ (Indian Bank) ಹುದ್ದೆಗಳ ಸಂಖ್ಯೆ: 1500 ಉದ್ಯೋಗ ಸ್ಥಳ: ಅಖಿಲ ಭಾರತ (ಭಾರತದಾದ್ಯಂತ) ಹುದ್ದೆಯ ಹೆಸರು: ಅಪ್ರೆಂಟಿಸ್ (Apprentice) ವೇತನ: ತಿಂಗಳಿಗೆ ರೂ. 12,300 15,000/- ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 25-ನವೆಂಬರ್-2026. ಅಧಿಕೃತ ವೆಬ್‌ಸೈಟ್: indianbank.in.

ಗೇಜ್ ಕೆಳಗೆ ತಟ್ಟಿನ ಚೀಲಗಳನ್ನು, ಭತ್ತದ ಹುಲ್ಲು, ಕಸ ಕಡ್ಡಿ ಹಾಕಿ ನೀರು ಹರಿಯದಂತೆ ತಡೆಯುತ್ತಿದ್ದಾರೆ-ರೈತರ ಆರೋಪ

ನೀರಾವರಿ ಇಲಾಖೆ ಅಧಿಕಾರಿಗಳ ನಡೆ ಖಂಡಿಸಿ ರೈತರ ಕಾಲುವೆ ಬಳಿ ಪ್ರತಿಭಟನೆ

ಕವಿತಾಳ: ತುಂಗಭದ್ರಾ ಎಡದಂಡೆ ಕಾಲುವೆಯ 69ನೇ ಉಪ ಕಾಲುವೆಗೆ ಸಮರ್ಪಕವಾಗಿ ನೀರು ಹರಿಸುವಂತೆ ಒತ್ತಾಯಿಸಿ ಇತ್ತಿಚೇಗೆ ಕವಿತಾಳ ನೀರಾವರಿ ಇಲಾಖೆ ಕಛೇರಿಗೆ ರೈತರು ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದ್ದರು ಆಗ ಸ್ಥಳದಲ್ಲಿದ್ದ ಎಇಇ ಈಶ್ವರ ಅವರು ಸಮರ್ಪಕವಾಗಿ ನೀರು ಬಿಡುವ ಬರವಸೆಯನ್ನು ನೀಡಿದ್ದರು ಆದ-'ರೇ ಈಗ ನೀರು ಸರಿಯಾಗಿ ಬಿಡುತ್ತಿಲ್ಲ ಹೀಗಾಗಿ ಬತ್ತದ ಬೆಳೆಗಳು ಒಣಗುತ್ತಿವೆ ಅಧಿಕಾರಿಗಳು ಬರವಸೆಯಂತೆ ನೀರು ಹರಿಸದ ನಡೆಯನ್ನು ಖಂಡಿಸಿ ಇಂದು 69ನೇ ಮೈಲ್ ಕಾಲುವೆ ಬಳಿ ರೈತರು ಪ್ರತಿಭಟನೆ ನಡೆಸಿದ ಘಟನೆ ನಡೆದಿದೆ.

'69ನೇ ಉಪ ಕಾಲುವೆಗೆ ನೀರು ಪೂರೈಸುವ ಗೇಜ್ ಎತ್ತರಿಸಿದ್ದರೂ ಅಧಿಕಾ-ರಿಗಳು ಕಳ್ಳಾಟ ನಡೆಸಿ ಗೇಜ್ ಕೆಳಗೆ ತಟ್ಟಿನ ಚೀಲಗಳನ್ನು, ಭತ್ತದ ಹುಲ್ಲು, ಕಸ ಕಡ್ಡಿ ಹಾಕಿ ನೀರು ಹರಿಯದಂತೆ ತಡೆಯುತ್ತಿದ್ದಾರೆ, 69ನೇ ಉಪ ನಾಲೆಗೆ ಪೂರೈಸಬೇಕಿದ್ದ ನೀರನ್ನು ಕದ್ದು ಮುಂದಿನ 76ನೇ ಕಾಲುವೆಗೆ ಬಿಡಲಾಗುತ್ತಿದೆ ನೀರು ಬರುವ ನಿರೀಕ್ಷೆಯಲ್ಲಿ ಕಾಯುತ್ತಿದ್ದ ರೈತರು ಗೇಜ್ ನೋಡಿದಲ್ಲಿ ಸರಿಯಾಗಿದೆ ಆದರೇ



ನೀರು ಬರುತ್ತಿಲ್ಲ ಎಂಬ ಅನುಮಾನದ ಮೇಲೆ ಕಾಲುವೆ ಹತ್ತಿರ ಬಂದು ಗೇಜ್ ಪರಿಶಿಲಿಸಿದಾಗ ಅಧಿಕಾರಿಗಳ ಕಳ್ಳಾಟ ಬಯಲಾಗಿದೆ, ಈ ರೀತಿಯಾಗಿ ಸುಳ್ಳು ಬರವಸೆ ನೀಡಿ ರೈತರಿಗೆ ಮೋಸಮಾಡುತ್ತಿರುವ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಅದುವರೆಗೂ ಪ್ರತಿಭಟನೆ ಮುಂದುವರೆಸಲಾಗುವುದು ಮತ್ತು ನಾಳೆಯಿಂದ ನಮ್ಮ ಮನೆಯ ಮಹಿಳೆಯರು ಮತ್ತು ಮಕ್ಕಳು ಸೇರಿ ಪ್ರತಿಭಟನೆಯನ್ನು ಇನ್ನಷ್ಟು ತೀವ್ರಗೊಳಿಸುವುದಾಗಿ' ರೈತರು ಎಚ್ಚರಿರಿಸಿದ್ದಾರೆ.

'ಕಾಲುವೆ ಮೇಲೆ ನಿಷೇದಾಜ್ಞೆ ಜಾರಿಯಲ್ಲಿದ್ದು ಪ್ರತಿಭಟನೆ ನಡೆಸದಂತೆ ಕವಿತಾಳ ಠಾಣಾ ಪಿಎಸ್‌ಐ ಅಜ್ಮೀರ್ ಅವರು ಮನವಿ ಮಾಡಿದರು, ಆದರೇ ಇತ್ತಿಚೆಗೆ ನೀರಾವರಿ ಅಧಿಕಾರಿಗಳೊಂದಿಗೆ ಚರ್ಚಿಸಿ ನೀರು ಪೂರೈಸಲು ಕ್ರಮಕೈಗೊಳ್ಳುವ ಬರವಸೆಯನ್ನು ಇಲಾಖೆ ಕಛೇರಿಗೆ ಮುತ್ತಿಗೆ ಹಾಕಿದಾಗ ನೀವು ನೀಡಿದ್ದಿರಿ ತಮ್ಮ ಮಾತು ಕೇಳಿಕೊಂಡು ನಾವು ಸುಮ್ಮನಿದ್ದೆವು ಇದೀಗ ಅಧಿಕಾರಿಗಳ ಮೋಸದಾಟ ಬಯಲಾಗಿದ್ದು ಅವರ ವಿರುದ್ಧ ತಾವು ಏನು ಕ್ರಮ ಕೈಗೋಳ್ಳುವಿರಿ ಎಂದು ಪ್ರಶ್ನಿಸಿ ಪ್ರತಿಭಟನೆಯನ್ನು ತಡೆಯಬೇಡಿ ಎಂದು ಹೇಳಿದರು.

69ನೇ ಕಾಲುವೆಗೆ ಹೆಚ್ಚಿನ ನೀರು ಹರಿಸುವ ಉದ್ದೇಶದಿಂದ ಇಂತಹ ಕೆಲಸ ಮಾಡಿರುವ ಅಧಿಕಾರಿಗಳು ಹಲವಾರು ವರ್ಷಗಳಿಂದ ಇಲ್ಲಿಯೇ ಬೇರುರಿದ್ದು ಲಂಚದ ಆಸೇಗಾಗಿ 76ನೇ ಕಾಲುವೆಗೆ ಹೆಚ್ಚಿನ ನೀರು ಹರಿಸುವುದು ಮೊದಲಿನಿಂದಲೂ ನಡೆದುಕೊಂಡು ಬಂದಿದೆ ಅದು ನಮಗೆ ಗೊತ್ತಿದೆ ನಮಗೆ ನ್ಯಾಯಯುತವಾಗಿ ಬರುವಷ್ಟು ನೀರನ್ನು ಅಧಿಕಾರಿಗಳು ನೀಡಬೇಕು ಮತ್ತು ಇಂತಹ ಕೆಲಸ ಮಾಡುತ್ತಿರುವ ನೀರಾವರಿ ಅಧಿಕಾರಿಗಳ ವಿರುದ್ಧ ಮೇಲಾಧಿಕಾ-ರಿಗಳು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಈಶಪ್ಪಗೌಡ, ಶರಣಪ್ಪಗೌಡ ತೋರಣದಿನ್ನಿ, ಶಿವು ಪಾಟೀಲ್, ಮಹಾಂತೇಶ್ ಗೌಡ, ಮಲ್ಲನಗೌಡ, ನರಸಪ್ಪ ಮೈಲಾರಿ, ಶಿವಬಸಪ್ಪ, ನಾಗಪ್ಪ ಚಿಕ್ಕದಿನ್ನಿ, ಬಸವರಾಜ, ಮಲ್ಲಯ್ಯ ಸಾಹುಕಾರ್,ಬಸವರಾಜ ರಮೇಶ್ ಸೇರಿದಂತೆ ನೂರಾರು ರೈತರು ಭಾಗವಹಿಸಿದ್ದರು.

ಅಖಿಲ ಭಾರತ ಗುಡ್ಡಗಾಡು ಓಟ ಚಾಂಪಿಯನ್ ಶಿಪ್ ಸಿಂಧನೂರು ಡಿಗ್ರಿ ಕಾಲೇಜಿನ ವಿದ್ಯಾರ್ಥಿಗಳು ಆಯ್ಕೆ

❏ ನೈಜ್ಯ ದೆಸೆ ನ್ಯೂಸ್

ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರಿನಲ್ಲಿ ನಡೆಯುವ ಅಖಿಲ ಭಾರತ ಗುಡ್ಡಗಾಡು ಓಟ ಪುರುಷ ಮತ್ತು ಮಹಿಳೆಯರ ಚಾಂಪಿಯನ್ ಶಿಪ್ ಗೆ ನಗರದ ಸರ್ಕಾರಿ ಪದವಿ ಕಾಲೇಜಿನ ಪುರುಷರ ವಿಭಾಗದಲ್ಲಿ ಚನ್ನಬಸವ, ಮಹಿಳೆಯರ ವಿಭಾಗದಲ್ಲಿ ಲಕ್ಷ್ಮಿ, ಬಾಳಮ್ಮ, ಲಕ್ಷ್ಮಿ, ಆಯ್ಕೆಯಾಗಿದ್ದಾರೆ ಎಂದು ಪ್ರಾಂಶುಪಾಲ್ ಡಾ.ಪಾಂಡು ತಿಳಿಸಿದರು.



ನವೆಂಬರ್ 5 ರಿಂದ 7ರವರೆಗೆ ಮಂಗಳೂರು ವಿಶ್ವವಿದ್ಯಾಲಯದಲ್ಲಿ ಅಖಿಲ ಭಾರತ ಗುಡ್ಡಗಾಡು ಓಟ ಪುರುಷ ಮತ್ತು ಮಹಿಳೆಯರ ಚಾಂಪಿಯನ್ ಶಿಪ್ ನಡೆಯಲಿದ್ದು, ಈ ಚಂಪಿಯನ್ ಶಿಪ್ ಗೆ ನಗರದ ಡಿಗ್ರಿ ಕಾಲೇಜಿನ ವಿದ್ಯಾರ್ಥಿಗಳು ಆಯ್ಕೆಯಾಗಿರುವುದು ಹೆಮ್ಮೆಯ ಸಂಗತಿ ಇವ-ರಿಗೆ ಸರ್ಕಾರಿ ಡಿಗ್ರಿ ಕಾಲೇಜಿನ ಅಭಿವೃದ್ಧಿ ಸಮಿತಿ ಅಧ್ಯಕ್ಷರು, ಸದಸ್ಯರು, ಬೋಧಕ, ಬೋಧಕೇತರರು ಹಾಗೂ ವಿದ್ಯಾರ್ಥಿ ಬಳಗದಿಂದ ಹಾರ್ದಿಕ ಅಭಿನಂದನೆಗಳನ್ನು ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ: ಐಕ್ಯೂ ಎಸಿ ಸಂಯೋಜಕರಾದ ಡಾ.ವೈಜನಾಥ ಸಗರಮಠ, ಹಿರಿಯ ಶ್ರೇಣಿ ಗ್ರಂಥಪಾಲಕರಾದ ಯಲ್ಲಪ್ಪ ಗೋನವಾರ, ಪತ್ರಾಂಕಿತ ವ್ಯವಸ್ಥಾಪಕ ಮಮ್ಮದ್ ಸಿದ್ಧಿ, ಸಹಾಯಕ ಪ್ರಾಧ್ಯಾಪಕ ಸೈಯದ್ ಅಜ್ಜರ ಹುಸೇನ್, ಉಪನ್ಯಾಸಕರಾದ ಮರಿಲಿಂಗಪ್ಪ, ವಿಶ್ವನಾಥ ಅರ್ಥಶಾಸ್ತ್ರ ವಿಭಾಗ, ನಿರುಪಾದಿ ಸಹಾಯಕ ಕಚೇರಿ, ಕ್ರೀಡಾ ವಿಭಾಗದ ಸಂಯೋಜಕ ಡಾ.ಲವಕುಮಾರ್, ದೈಹಿಕ ಶಿಕ್ಷಣ ನಿರ್ದೇಶಕ ಶಿವ.ಕೆ ಹಾಗೂ ವಿದ್ಯಾರ್ಥಿ ಬೃಂದಾ ಉಪಸ್ಥಿತರಿದ್ದರು.

ಹಾಲು, ಸಾರಿಗೆ ದರ ಏರಿಕೆ ಜನವಿರೋಧಿ ನೀತಿ

ಆಡಳಿತ ನಡೆಸಲು ಸಾಧ್ಯವಾಗದಿದ್ದರೆ ಮಧ್ಯಂತರ ಚುನಾವಣೆ ಎದುರಿಸಿ ವೀರೇಶ ನಿಡಗುಂದಿಮಠ ಆಕ್ರೋಶ

❏ ನೈಜ್ಯ ದೆಸೆ ನ್ಯೂಸ್

ಕುಷ್ಟಗಿ: ರಾಜ್ಯ ಸರ್ಕಾರ ಹಾಲಿನ ದರ ಹಾಗೂ ಬಸ್ ಸಾರಿಗೆ ಪ್ರಯಾಣ ದರ ಏರಿಕೆ ಮಾಡುವ ಮೂಲಕ ಜನಸಾಮಾನ್ಯರ ಮೇಲೆ ಮತ್ತಷ್ಟು ಆರ್ಥಿಕ ಹೊರೆ ಹೊರಿಸಿದೆ. ಸರ್ಕಾರದ ಈ ಜನವಿರೋಧಿ ನೀತಿಯನ್ನು ಜೆಡಿಎಸ್ ತಾಲೂಕು ಅಧ್ಯಕ್ಷ ವೀರೇಶ ನಿಡಗುಂದಿಮಠ ತೀವ್ರವಾಗಿ ಖಂಡಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಈಗಾಗಲೇ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಜನಸಾಮಾನ್ಯರು ಸಂಕಷ್ಟ ಎದುರಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಹಾಲಿನ ದರ ಹಾಗೂ ಸಾರಿಗೆ ಪ್ರಯಾಣ ದರ ಹೆಚ್ಚಿಸಿರುವುದು



ಜನರ ಬದುಕಿನ ಮೇಲೆ ನೇರ ಪರಿಣಾಮ ಬೀರಲಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ದಿನನಿತ್ಯ ಹಾಲು ಖರೀದಿಸುವ ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳು ಮತ್ತು ಉದ್ಯೋಗ, ಶಿಕ್ಷಣ ಸೇರಿದಂತೆ ವಿವಿಧ ಕಾರ್ಯಗಳಿಗಾಗಿ ಸಾರ್ವಜನಿಕ ಸಾರಿಗೆಯನ್ನು ಅವಲಂಬಿಸಿರುವ ಪ್ರಯಾಣಿಕರಿಗೆ ಈ ದರ ಏರಿಕೆ ಮತ್ತಷ್ಟು ಹೊರೆಯಾಗಲಿದೆ. ಜನರ ಜೀವನಮಟ್ಟ ಸುಧಾರಿಸಬೇಕಾದ ಸರ್ಕಾರವೇ ಜನರ ಜೇಬಿಗೆ ಕತ್ತರಿ ಹಾಕುತ್ತಿರುವುದು ದುರಂತದ ಸಂಗತಿ ಎಂದು ಟೀಕಿಸಿದ್ದಾರೆ.

ಚುನಾವಣೆಯ ಸಂದರ್ಭದಲ್ಲಿ ಜನರಿಗೆ ಹಲವು ಭರವಸೆಗಳನ್ನು ನೀಡಿದ್ದ ಕಾಂಗ್ರೆಸ್ ಸರ್ಕಾರ, ಅಧಿಕಾರಕ್ಕೆ ಬಂದ ಬಳಿಕ ಒಂದರ ಮೇಲೊಂದರಂತೆ ದರ ಏರಿಕೆ ಮಾಡುತ್ತಿರುವುದು ಸರಿಯಲ್ಲ. ಜನರ ಹಿತ ಕಾಪಾಡಬೇಕಾದ ಸರ್ಕಾರವೇ ಜನರ ಮೇಲೆ ಆರ್ಥಿಕ ಹೊರೆ ಹೇರುತ್ತಿರುವುದು ಜನವಿರೋಧಿ ಆಡಳಿತಕ್ಕೆ ಸಾಕ್ಷಿಯಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ರಾಜ್ಯದಲ್ಲಿ ಆಡಳಿತ ನಡೆಸಲು ಸಾಧ್ಯವಾಗದಿದ್ದರೆ ಅಧಿಕಾರದಲ್ಲಿ ಮುಂದುವ-ರಿಯುವ ನೈತಿಕತೆ ಏನು ಜನರ ಮೇಲೆ ನಿರಂತರ ಹೊರೆ ಹೇರುವ ಬದಲು ಮಧ್ಯಂತರ ಚುನಾವಣೆ ಎದುರಿಸಿ ಜನಾದೇಶ ಪಡೆಯಲಿ ಎಂದು ರಾಜ್ಯ ಸರ್ಕಾರಕ್ಕೆ ಸವಾಲು ಹಾಕಿದ್ದಾರೆ. ಹಾಲು ಹಾಗೂ ಸಾರಿಗೆ ದರ ಏರಿಕೆ ನಿರ್ಧಾರವನ್ನು ತಕ್ಷಣ ಹಿಂಪಡೆಯಬೇಕು. ಜನಸಾಮಾನ್ಯರ ಹಿತಾಸಕ್ತಿಯನ್ನು ಕಾಪಾಡುವ ನಿಟ್ಟಿನಲ್ಲಿ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ವೀರೇಶ ನಿಡಗುಂದಿಮಠ ಆಗ್ರಹಿಸಿದ್ದಾರೆ.

ಕಂಪ್ಲಿ ಎಪಿಎಂಸಿ ಅಭಿವೃದ್ಧಿಗೆ ಆದ್ಯತೆ:1.17 ಕೋಟಿ ಕಾಮಗಾರಿಗೆ ಶಾಸಕ ಜೆ.ಎನ್.ಗಣೇಶ್ ಚಾಲನೆ

ಕುರುಗೋಡು ಸ್ವತಂತ್ರ ಎಪಿಎಂಸಿ ಮಾಡಲು ಶೀಘ್ರ ಕ್ರಮ; ಮಿನಿ ವಿಧಾನಸೌಧ ಶೀಘ್ರದಲ್ಲೇ ಲೋಕಾರ್ಪಣೆ



❏ ನೈಜ್ಯ ದೆಸೆ ನ್ಯೂಸ್

ಕಂಪ್ಲಿ: ಪಟ್ಟಣದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ) ಆವರಣದಲ್ಲಿರುವ ತಹಶೀಲ್ದಾರ್ ಕಚೇರಿ ಮುಂಭಾಗದ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿಗೆ ಶಾಸಕ ಜೆ.ಎನ್. ಗಣೇಶ್ ಗುರುವಾರ ಭೂಮಿ ಪೂಜೆ ನೆರವೇರಿಸಿದರು. 2025-26ನೇ ಸಾಲಿನ ಮಾರುಕಟ್ಟೆ ಅಭಿವೃದ್ಧಿ ನೆರವು ನಿಧಿ ಮತ್ತು ಸಮಿತಿ ನಿಧಿ ಯೋಜನೆಯಡಿ ಸುಮಾರು 1.17 ಕೋಟಿ (117 ಲಕ್ಷ) ವೆಚ್ಚದಲ್ಲಿ ಈ ಸಿಸಿ ರಸ್ತೆ ಹಾಗೂ ಚರಂಡಿ ನಿರ್ಮಾಣ ಮಾಡಲಾಗುತ್ತಿದೆ.

ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಶಾಸಕ ಜೆ.ಎನ್.ಗಣೇಶ್, "ಎಪಿಎಂಸಿ ಅಭಿವೃದ್ಧಿಗಾಗಿ ಈಗಾಗಲೇ 10 ಕೋಟಿ ಅನುದಾನ ನೀಡಲಾಗಿದೆ. ರೈತರಿಗೆ ಮತ್ತು ವ್ಯಾಪಾರಿಗಳಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲು ಪ್ರತಿ ಹಂತದಲ್ಲೂ ಆದ್ಯತೆ ನೀಡಲಾಗುತ್ತಿದೆ. ಹಿಂದೆ ಹೊಸಪೇಟೆ ಎಪಿಎಂಸಿ ವ್ಯಾಪ್ತಿಯಲ್ಲಿದ್ದ ಕಂಪ್ಲಿ ಉಪ ಮಾರುಕಟ್ಟೆ ಈಗ ಸ್ವತಂತ್ರಗೊಂಡು ಬಳ್ಳಾರಿ ವ್ಯಾಪ್ತಿಗೆ ಸೇರಿದೆ. ಅದೇ ಮಾದ-ರಿಯಲ್ಲಿ ಕುರುಗೋಡು ಎಪಿಎಂಸಿಯನ್ನೂ ಸಹ ಅತಿ ಶೀಘ್ರದಲ್ಲಿ ಸ್ವತಂತ್ರ ಮಾರುಕಟ್ಟೆಯನ್ನಾಗಿ ಮಾಡಲಾಗುವುದು," ಎಂದರು.

ರೈತ ಭವನ ಮತ್ತು ಮಿನಿ ವಿಧಾನಸೌಧ: "ರೈತರ ಅನುಕೂಲಕ್ಕಾಗಿ 'ರೈತ ಭವನ' ನಿರ್ಮಿಸಲು ಜಾಗ ಗುರುತಿಸುವ ಪ್ರಕ್ರಿಯೆ ನಡೆಯುತ್ತಿದ್ದು, ಸ್ಥಳ ಸಿಕ್ಕ ತಕ್ಷಣ ಕಾಮಗಾರಿ ಆರಂಭಿಸಲಾಗುವುದು. ಕಂಪ್ಲಿಯ ಮಿನಿ ವಿಧಾನಸೌಧದ ಮುಖ್ಯ ಕಟ್ಟಡ ಕಾಮಗಾರಿ ಪೂರ್ಣಗೊಂಡಿದೆ. ಕಾಂಪೌಂಡ್, ಚರಂಡಿಯಂತಹ ಸಣ್ಣಪುಟ್ಟ ಕೆಲಸಗಳು ಮುಗಿದ ತಕ್ಷಣ, ಅದನ್ನು ಅದ್ದೂ-ರಿಯಾಗಿ ಉದ್ಘಾಟಿಸಿ ಸಾರ್ವಜನಿಕರ ಸೇವೆಗೆ ಮುಕ್ತಗೊಳಿಸಲಾಗುವುದು," ಎಂದು ತಿಳಿಸಿದರು.

ಚುನಾವಣೆಗೆ ಕಾಂಗ್ರೆಸ್ ಸಿದ್ಧ: ತಾಲೂಕು ಮತ್ತು ಜಿಲ್ಲಾ ಪಂಚಾಯಿತಿ ಚುನಾವಣೆಗಳಿಗೆ ಕಾಂಗ್ರೆಸ್ ಪಕ್ಷ ಸಂಪೂರ್ಣ ಸಿದ್ಧವಾಗಿದೆ ಎಂದ ಶಾಸಕರು, ಇಂದೇ ಚುನಾವಣೆ ಘೋಷಣೆಯಾದರೂ ಎದುರಿಸಲು ಸಿದ್ಧರಿದ್ದೇವೆ.

ನಿಷ್ಠಾವಂತ ಕಾರ್ಯಕರ್ತರಿಗೆ ಟಿಕೆಟ್ ನೀಡಿ ಗೆಲ್ಲಿಸಿಕೊಂಡು ಬರಲಾಗುವುದು ಎಂದರು. ಇದೇ ವೇಳೆ, ಬಸ್ ಮತ್ತು ಹಾಲಿನ ದರ ಏರಿಕೆ ಕುರಿತು ಪ್ರತಿಕ್ರಿಯಿಸಿ, ಜನರ ಹಿತದೃಷ್ಟಿಯಿಂದ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ಚರ್ಚಿಸಿ ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು. ಕಂಪ್ಲಿ ಸೇತುವೆ ಕನಸು ನನಸಿಗೆ ಸಹಕರಿಸಿ: ಕಂಪ್ಲಿ ಸೇತುವೆ ನಿರ್ಮಾಣದ ಕನಸು ನನಸಾಗುವ ದಿನ ಹತ್ತಿರ ಬಂದಿದೆ. ಸೇತುವೆಗಾಗಿ ರೈತರ ಜಮೀನುಗಳನ್ನು ಸರ್ಕಾರ ನಿಗದಿಪಡಿಸಿದ ದರದಲ್ಲೇ ಖರೀದಿಸಲಾಗುವುದು.

ಈ ನಿಟ್ಟಿನಲ್ಲಿ ರೈತರೊಂದಿಗೆ ಸಭೆ ನಡೆಸಿ, ಜಮೀನು ನೀಡಲು ಮನವಿ ಮಾಡಲಾಗುವುದು ಎಂದು ಶಾಸಕರು ಹೇಳಿದರು. ಕಾರ್ಯಕ್ರಮದಲ್ಲಿ ಎಪಿಎಂಸಿ ಅಧ್ಯಕ್ಷ ಎನ್. ಹಬೀಬ್ ರೆಹಮಾನ್ ಮಾತನಾಡಿದರು. ವೇದಿಕೆಯಲ್ಲಿ ತಹಶೀಲ್ದಾರ್ ಜೂಗಲ್ ಮಂಜುನಾಯಕ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ಕೆ. ಶ್ರೀನಿವಾಸರಾವ್, ಎಪಿಎಂಸಿ ಉಪಾಧ್ಯಕ್ಷ ಇಟ್ಟಾಗಿ ಶರಣಬಸವ, ಸದಸ್ಯರಾದ ಗೌಡ್ರು ಅಂಜಿನಪ್ಪ, ಈ. ದೊಡ್ಡರ?ರಿಸ್ವಾಮಿ, ಪಂಪಾಪತಿ, ಕೆ. ಕಾಸಿಂಸಾಬ್, ಚನ್ನಬಸಪ್ಪ ಹಾಗೂ ಪ್ರಮುಖರಾದ ಬಿ. ನಾರಾಯಣಪ್ಪ, ಡಿ. ಮೌನೇಶ್ ಸೇ-ರಿದಂತೆ ಹಲವರು ಉಪಸ್ಥಿತರಿದ್ದರು.

ವರದಿ: ಜಿಲಾನಸಾಬ್ ಬಡಿಗೇರ್

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

ಅಂತರ ಕಾಲೇಜು ಅಥ್ಲೆಟಿಕ್ ಕ್ರೀಡಾಕೂಟದಲ್ಲಿ ವಿ.ಆರ್.ಇ.ಟಿ. ಕ್ರೀಡಾಪಟುಗಳ ಅಮೋಘ ಸಾಧನೆ

ಕಾಲೇಜುನ ಓವರ್ ಆಲ್ ಚಾಂಪಿಯನ್ಶಿಪ್ ಪುರುಷರ ಹಾಗೂ ಮಹಿಳೆಯರ ಸಮಗ್ರ ಚಾಂಪಿಯನ್ಶಿಪ್ ಹಲವು ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನಗಳ ಗರಿ

❏ ನೈಜ್ಯ ದೆಸೆ ನ್ಯೂಸ್

ರಾಯಚೂರು: ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ಹಾಗೂ ತಾರನಾಥ ಶಿಕ್ಷಣ ಸಂಸ್ಥೆಯ ಲಕ್ಷ್ಮೀ ವೆಂಕಟೇಶ ದೇಸಾಯಿ ಮಹಾವಿದ್ಯಾಲಯದ ಸಂಯುಕ್ತ ಆಶ್ರಯದಲ್ಲಿ ರಾಯಚೂರಿನ ಎಲ್.ವಿ.ಡಿ. ಕಾಲೇಜಿನ ಆವರಣದಲ್ಲಿ ನಡೆದ 2026ನೇ ಸಾಲಿನ 4ನೇ ಅಂತರ ಕಾಲೇಜು ಅಥ್ಲೆಟಿಕ್ ಕ್ರೀಡಾಕೂಟದಲ್ಲಿ ವಿ.ಆರ್.ಇ.ಟಿ. ದೈಹಿಕ ಶಿಕ್ಷಣ ಮಹಾವಿದ್ಯಾಲಯದ ಪುರುಷ ಹಾಗೂ ಮಹಿಳಾ ವಿಭಾಗದ ಕ್ರೀಡಾಪಟುಗಳು ಅತ್ಯುತ್ತಮ ಪ್ರದರ್ಶನ ನೀಡಿ ಗಮನಾರ್ಹ ಸಾಧನೆ ಮಾಡಿದ್ದಾರೆ.

ಕ್ರೀಡಾಕೂಟದ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿದ ಮಹಾವಿದ್ಯಾಲಯದ ವಿದ್ಯಾರ್ಥಿಗಳು ತಮ್ಮ ಕಠಿಣ ಪರಿಶ್ರಮ, ನಿರಂತರ ಅಭ್ಯಾಸ, ಶಿಸ್ತು ಹಾಗೂ ಕ್ರೀಡಾ ಪ್ರತಿಭೆಯ ಮೂಲಕ ಹಲವು ಪ್ರಥಮ, ದ್ವಿತೀಯ, ತೃತೀಯ ಹಾಗೂ ನಾಲ್ಕನೇ ಸ್ಥಾನಗಳನ್ನು ಪಡೆದು ಸಂಸ್ಥೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ. ವಿಶೇಷವಾಗಿ ಓಟ, ರಿಲೇ, ಎತ್ತರ ಜಿಗಿತ, ಉದ್ದ ಜಿಗಿತ, ಗುಂಡು ಎಸೆತ, ಚಕ್ರ ಎಸೆತ, ಬಲ್ಲೆ ಎಸೆತ ಹಾಗೂ ಸುತ್ತಿಗೆ ಎಸೆತ ಸ್ಪರ್ಧೆಗಳಲ್ಲಿ ಕ್ರೀಡಾಪಟುಗಳು ಉತ್ತಮ ಸಾಧನೆ ಮೆರೆದಿದ್ದಾರೆ. ಪುರುಷರ ವಿಭಾಗದಲ್ಲಿ ಸಾಧನೆ:



4100 ಮೀಟರ್ ರಿಲೇ ಸ್ಪರ್ಧೆಯಲ್ಲಿ ಈರೇಶ, ಮಣಿಕಂಠ, ಶಿವಲಿಂಗ ಹಾಗೂ ಗೋಪಾಲ ಅವರ ತಂಡ ಪ್ರಥಮ ಸ್ಥಾನ ಗಳಿಸಿದೆ. 1500 ಮೀಟರ್ ಓಟದಲ್ಲಿ ಭೀಮಶಂಕರ್ ಪ್ರಥ-'ಮ ಸ್ಥಾನ, 100 ಮೀಟರ್ ಓಟದಲ್ಲಿ ಈರೇಶ ತೃತೀಯ ಸ್ಥಾನ, 200 ಮೀಟರ್ ಓಟದಲ್ಲಿ ಪ್ರಜ್ವಲ್ ನಾಲ್ಕನೇ ಸ್ಥಾನ ಪಡೆದಿದ್ದಾರೆ.

110 ಮೀಟರ್ ಹರ್ಡಲ್ಸ್ ಹಾಗೂ 400 ಮೀಟರ್ ಹರ್ಡಲ್ಸ್ ಸ್ಪರ್ಧೆಗಳಲ್ಲಿ ನವೀನ್ ಕುಮಾರ್ ತೃತೀಯ ಸ್ಥಾನ ಗಳಿಸಿದ್ದು, 400 ಮೀಟರ್ ಹರ್ಡಲ್ಸ್‌ನಲ್ಲಿ ರಾಜೇಶ್ ನಾಲ್ಕನೇ ಸ್ಥಾನ ಪಡೆದಿದ್ದಾರೆ. ಚಕ್ರ ಎಸೆತದಲ್ಲಿ ನಾಗರಾಜ ತೃತೀಯ ಸ್ಥಾನ, ಎತ್ತರ ಜಿಗಿತದಲ್ಲಿ ಶಶಿಕುಮಾರ್ ಪ್ರಥಮ ಹಾಗೂ ರಾಹುಲ್ ದ್ವಿತೀಯ ಸ್ಥಾನ ಪಡೆದಿದ್ದಾರೆ. ಬಲ್ಲೆ ಎಸೆತದಲ್ಲಿ ನಿತಿನ್ ಕುಮಾರ್ ಪ್ರಥಮ ಸ್ಥಾನ, ಸುತ್ತಿಗೆ ಎಸೆತದಲ್ಲಿ ಸಂತೋಷ್ ತೃತೀಯ ಸ್ಥಾನ ಗಳಿಸಿದ್ದಾರೆ. ಟ್ರಿಪಲ್ ಜಂಪ್‌ನಲ್ಲಿ ಉಮೇಶ್ ಪ್ರಥ-'ಮ ಹಾಗೂ ಮಣಿಕಂಠ ದ್ವಿತೀಯ ಸ್ಥಾನ ಪಡೆದು ತಮ್ಮ ಕ್ರೀಡಾ ಸಾಮರ್ಥ್ಯವನ್ನು ಮೆರೆದಿದ್ದಾರೆ.

ಮಹಿಳೆಯರ ವಿಭಾಗದಲ್ಲಿ ಸಾಧನೆ: ಮಹಿಳಾ ಕ್ರೀಡಾಪಟುಗಳು ವಿವಿಧ ಸ್ಪರ್ಧೆಗಳಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿ ಗಮನಾರ್ಹ ಯಶಸ್ಸು ಸಾಧಿಸಿದ್ದಾರೆ. 100 ಮೀಟರ್ ಓಟದಲ್ಲಿ ಜ್ಞಾನಮ್ಮ ಪ್ರಥಮ ಸ್ಥಾನ, 200 ಮೀಟರ್ ಓಟದಲ್ಲಿ ಜ್ಞಾನಮ್ಮ ತೃತೀಯ ಹಾಗೂ ಬಿಂದುಶ್ರೀ ನಾಲ್ಕನೇ ಸ್ಥಾನ ಪಡೆದಿದ್ದಾರೆ. 1500 ಮೀಟರ್ ಓಟದಲ್ಲಿ ಭವಾನಿ ತೃತೀಯ ಸ್ಥಾನ ಹಾಗೂ 10,000 ಮೀಟರ್ ಓಟದಲ್ಲಿ ಕಮಲಾಕ್ಷಿ ತೃತೀಯ ಸ್ಥಾನ ಗಳಿಸಿದ್ದಾರೆ.

110 ಮೀಟರ್ ಹರ್ಡಲ್ಸ್‌ನಲ್ಲಿ ಬಿಂದುಶ್ರೀ ಪ್ರಥಮ ಹಾಗೂ ಶಾಮಲ ದ್ವಿತೀಯ ಸ್ಥಾನ ಪಡೆದಿದ್ದಾರೆ. 4100 ಮೀಟರ್ ರಿಲೇಯಲ್ಲಿ ಬಿಂದುಶ್ರೀ, ಅಕ್ಷತಾ, ಸುಚಿತ್ರ ಹಾಗೂ ಜ್ಞಾನಮ್ಮ ಅವರ ತಂಡ ಪ್ರಥಮ ಸ್ಥಾನ ಗಳಿಸಿದೆ. 4400 ಮೀಟರ್ ರಿಲೇಯಲ್ಲಿ ಭವಾನಿ, ಜ್ಞಾನಮ್ಮ, ಅಕ್ಷತಾ ಹಾಗೂ ಕಮಲಾಕ್ಷಿ ಅವರ ತಂಡ ಪ್ರಥ-'ಮ ಸ್ಥಾನ ಪಡೆದು ವಿಶೇಷ ಸಾಧನೆ ಮಾಡಿದೆ. ಗುಂಡು ಎಸೆತದಲ್ಲಿ ಸಲಾಮ್ ಪ್ರಥ-'ಮ ಸ್ಥಾನ, ಉದ್ದ ಜಿಗಿತದಲ್ಲಿ ಅಕ್ಷತಾ ಪ್ರಥ-'ಮ ಹಾಗೂ ಬಿಂದುಶ್ರೀ ದ್ವಿತೀಯ ಸ್ಥಾನ ಪಡೆದಿದ್ದಾರೆ. ಚಕ್ರ ಎಸೆತದಲ್ಲಿ ಶಾಮಲ ಪ್ರಥ-'ಮ ಸ್ಥಾನ, ಎತ್ತರ ಜಿಗಿತದಲ್ಲಿ ಅಕ್ಷತಾ ಪ್ರಥಮ ಹಾಗೂ ಕಮಲಾಕ್ಷಿ ತೃತೀಯ ಸ್ಥಾನ ಗಳಿಸಿದ್ದಾರೆ.

ಇನ್ನು ಸುತ್ತಿಗೆ ಎಸೆತ ಹಾಗೂ ಬಲ್ಲೆ ಎಸೆತ ಸ್ಪರ್ಧೆಗಳಲ್ಲಿ ಶಾಮಲ ದ್ವಿತೀಯ ಸ್ಥಾನ ಪಡೆದು ತಮ್ಮ ಪ್ರತಿಭೆಯನ್ನು ಸಾಬೀತುಪಡಿಸಿದ್ದಾರೆ. ಕ್ರೀಡಾಪಟುಗಳ ಈ ಸಾಧನೆಗೆ ವಿ.ಆರ್.ಇ.ಟಿ. ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಶ್ರೀಮತಿ ಮಹಾದೇವಿ ಪಾಸೋಡಿ ಹಾಗೂ ಕಾರ್ಯದರ್ಶಿಗಳಾದ ಡಾ. ರಾಜಶೇಖರ್ ಪಾಸೋಡಿ ಅವರು ಹರ್ಷ ವ್ಯಕ್ತಪಡಿಸಿ, ಸಾಧನೆ ಮಾಡಿದ ಎಲ್ಲಾ ಕ್ರೀಡಾಪಟುಗಳಿಗೆ ಅಭಿನಂದನೆ ಸಲ್ಲಿಸಿದ್ದಾರೆ.

ವಿದ್ಯಾರ್ಥಿಗಳಲ್ಲಿನ ಕ್ರೀಡಾ ಪ್ರತಿಭೆಯನ್ನು ಗುರುತಿಸಿ ಸೂಕ್ತ ತರಬೇತಿ ನೀಡಿದ ಹನುಮಂತರೆಡ್ಡಿ ಹಾಗೂ ಪ್ರೋತ್ಸಾಹ ನೀಡಿದ ದೈಹಿಕ ಶಿಕ್ಷಣ ವಿಭಾಗದ ಉಪನ್ಯಾಸಕರು ಮತ್ತು ತರಬೇತುದಾರರ ಕಾರ್ಯವನ್ನು ಸಂಸ್ಥೆಯ ಆಡಳಿತ ಮಂಡಳಿ ಶ್ಲಾಘಿಸಿದೆ. ಕ್ರೀಡೆಯು ವಿದ್ಯಾರ್ಥಿಗಳಲ್ಲಿ ಶಿಸ್ತು, ಆತ್ಮವಿಶ್ವಾಸ, ನಾಯಕತ್ವ ಗುಣ ಹಾಗೂ ಸಾಧಿಸುವ ಛಲವನ್ನು ಬೆಳೆಸುತ್ತದೆ. ಇಂತಹ ಸಾಧನೆಗಳು ಇತರ ವಿದ್ಯಾರ್ಥಿಗಳಿಗೂ ಪ್ರೇರಣೆಯಾಗಲಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಮುಂದಿನ ದಿನಗಳಲ್ಲಿ ಮಹಾವಿದ್ಯಾಲಯದ ಕ್ರೀಡಾಪಟುಗಳು ರಾಷ್ಟ್ರಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಇನ್ನಷ್ಟು ಪ್ರಶಸ್ತಿಗಳನ್ನು ಮುಡಿಗೇರಿಸಿಕೊಂಡು ಸಂಸ್ಥೆ ಹಾಗೂ ಜಿಲ್ಲೆಗೆ ಕೀರ್ತಿ ತರಲಿ ಎಂದು ಶುಭ ಹಾರೈಸಿದ್ದಾರೆ. ಈ ಸಂದರ್ಭದಲ್ಲಿ ವಿ.ಆರ್.ಇ.ಟಿ. ಶಿಕ್ಷಣ ಸಂಸ್ಥೆಯ ಉಪನ್ಯಾಸಕರು, ಸಿಬ್ಬಂದಿ ವರ್ಗದವರು ಹಾಗೂ ಕ್ರೀಡಾಭಿಮಾನಿಗಳು ಸಾಧಕ ಕ್ರೀಡಾಪಟುಗಳಿಗೆ ಅಭಿನಂದನೆ ಸಲ್ಲಿಸಿ ಸಂತಸ ವ್ಯಕ್ತಪಡಿಸಿದ್ದಾರೆ.

ವಚನ ದರ್ಶನ

ಉದಕದೊಳಗೆ ಬಚ್ಚಿಟ್ಟ ಬಯ್ಕೆಯ ಕಿಚ್ಚಿನಂತಿದ್ದಿತ್ತು ಸಸಿಯೊಳಗಣ ರಸದ ರುಚಿಯಂತಿದ್ದಿತ್ತು, ನೆನೆಯೊಳಗಣ ಪರಿಮಳದಂತಿದ್ದಿತ್ತು,ಕೂಡಲ ಸಂಗಮದೇವಾ, ಕನ್ನೆಯ ಸ್ನೇಹದಂತಿದ್ದಿತ್ತು

ನೀವು ಕೇಳುತ್ತಿರುವುದು ಶಿವಶರಣ ವಿಶ್ವಗುರು ಶ್ರೀ ಬಸವಣ್ಣನವರ ಪ್ರಸಿದ್ಧ ವಚನಗಳಲ್ಲೊಂದಾದ ಉದಕದೊಳಗೆ ಬಚ್ಚಿಟ್ಟ ಬಯ್ಕೆಯ ಕಿಚ್ಚಿನಂತಿದ್ದಿತ್ತು.

ಈ ವಚನದಲ್ಲಿ ವಿಶ್ವಗುರು ಬಸವಣ್ಣನವರು ಭಗವಂತನ ಕೂಡಲಸಂಗಮದೇವನ ಅಸ್ತಿತ್ವ ಮತ್ತು ಆತನ ಸಾಕ್ಷಾತ್ಕಾರದ ಅನುಭೂತಿಯನ್ನು ಅದ್ಭುತವಾದ ಉಪಮೆಗಳ ಮೂಲಕ ವಿವರಿಸಿದ್ದಾರೆ.

ಉದಕದೊಳಗೆ ಬಚ್ಚಿಟ್ಟ ಬಯ್ಕೆಯ ಕಿಚ್ಚಿನಂತಿದ್ದಿತ್ತು: ನೀರಿನ ಆಳದಲ್ಲಿ ಅಡಗಿರುವ ಬಡಬಾಗ್ನಿಯಂತೆ (ಜ್ವಾಲೆ) ದೇವರ ಶಕ್ತಿ ಜಗತ್ತಿನ ಕಣಕಣದಲ್ಲೂ ಗುಪ್ತವಾಗಿ ಅಡಗಿದೆ. ನೀರು ಮತ್ತು ಬೆಂಕಿ ಪರಸ್ಪರ ವಿರುದ್ಧವಾಗಿದ್ದರೂ ನೀರೊಳಗೆ ಉಷ್ಣತೆ ಇರುವಂತೆ, ಪ್ರಕೃತಿಯಲ್ಲಿ ಭಗವಂತನು ಅದೃಶ್ಯನಾಗಿ ನೆಲೆಸಿದ್ದಾನೆ.

ಸಸಿಯೊಳಗಣ ರಸದ ರುಚಿಯಂತಿದ್ದಿತ್ತು
ಚಿಕ್ಕದಾದ ಸಸ್ಯ ಅಥವಾ ಗಿಡದೊಳಗೆ ಇರುವ ರಸದ ರುಚಿಂ-ಯನ್ನು ಮೇಲ್ನೋಟಕ್ಕೆ ನೋಡಿ ತಿಳಿಯಲು ಸಾಧ್ಯವಿಲ್ಲ, ಅದನ್ನು ಅನುಭವಿಸಿಯೇ ತಿಳಿಯಬೇಕು. ಹಾಗೆಯೇ ದೇವರನ್ನು ಕಣ್ಣಿಗೆ ಕಾಣದಿದ್ದರೂ ಅನುಭವದಿಂದ ಅರಿಯಬಹುದು.

ನೆನೆಯೊಳಗಣ ಮೊಗ್ಗಿನೊಳಗಣ ಪರಿಮಳದಂತಿದ್ದಿತ್ತು ಹೂವಾಗುವ ಮುನ್ನ ಮೊಗ್ಗಿನೊಳಗೆ ಸುಗಂಧವು ಹೇಗೆ ಅಡಗಿರುತ್ತದೆಯೋ, ಹಾಗೆ ಭಗವಂತನ ಅಸ್ತಿತ್ವವು ಜಗತ್ತಿನಲ್ಲಿ ಅವಿಭಾಜ್ಯವಾಗಿದೆ. ಹೂವು ಅರಳಿದಾಗ ಪರಿಮಳ ಹರಡುವಂತೆ, ಭಕ್ತಿ ಪಕ್ವವಾದಾಗ ದೇವರು ಪ್ರಕಟನಾಗುತ್ತಾನೆ.

ಕನ್ಯೆಯೊಳಗಣ ಒಲವಿನಂತಿದ್ದಿತ್ತು
ಒಬ್ಬ ಹೆಣ್ಣುಮಗಳ ಮನಸ್ಸಿನಲ್ಲಿರುವ ಪ್ರೀತಿ ಅಥವಾ ಒಲವು ಕಣ್ಣಿಗೆ ಕಾಣಿಸುವುದಿಲ್ಲ, ಆದರೆ ಅವಳು ಪ್ರೀತಿಸಿದಾಗ ಮಾತ್ರ ಅದು ವ್ಯಕ್ತವಾಗುತ್ತದೆ. ಅದೇ ರೀತಿ ಭಕ್ತನಲ್ಲಿ ನಿಜವಾದ ಭಕ್ತಿ ಮೂಡಿದಾಗ ಕೂಡಲಸಂಗಮದೇವನ ಸಾನ್ನಿಧ್ಯದ ಅರಿವಾಗುತ್ತದೆ.

ದೇವರು ಎಲ್ಲೋ ದೂರದಲ್ಲಿಲ್ಲ, ಅವನು ನಮ್ಮೊಳಗೇ, ಈ ಸೃಷ್ಟಿಯ ಪ್ರತಿ ಜೀವಿಯಲ್ಲೂ ಅತ್ಯಂತ ಸೂಕ್ಷ್ಮವಾಗಿ, ಅದೃಶ್ಯವಾಗಿ ಹಾಸುಹೊಕ್ಕಾಗಿದ್ದಾನೆ ಎಂಬುದನ್ನು ಬಸವಣ್ಣನವರು ಈ ವಚನದಲ್ಲಿ ತಿಳಿಸಿಕೊಟ್ಟಿದ್ದಾರೆ.ಬಸವಾದಿ ಶರಣರ ವಚನಗಳು ಮನುಕುಲದ ದಾ-ರಿದೀಪ ಶರಣು ಶರಣಾರ್ಥಿಗಳು.

ಪಂಪಯ್ಯಸ್ವಾಮಿ ಸಾಲಿಮಠ ಅಂತರಗಂಗಿ-ಸಿಂಧನೂರು. 998094144

ಸರ್ಕಾರಿ ಬಾಲಕಿಯರ ಶಾಲೆಗೆ ಇಂಡಿ ವಿಲೇಜ್ ಫೌಂಡೇಶನ್‌ನಿಂದ 7 ಲ್ಯಾಪ್‌ಟಾಪ್ ವಿತರಣೆ

ಎನ್‌ಜಿಒ ಕಾರ್ಯ ಶ್ಲಾಘನೀಯ; ವಿದ್ಯಾರ್ಥಿನಿಯರು ಸದುಪಯೋಗಪಡಿಸಿಕೊಳ್ಳಿ – ತಹಶೀಲ್ದಾರ್ ಅಶೋಕ ಪವಾರ್

❑ ನೈಜ್ಯ ದೆಸೆ ನ್ಯೂಸ್

ಸಿರವಾರ: ಸರ್ಕಾರಿ ಶಾಲೆಗಳ ಬಗ್ಗೆ ಕೆಲವರಲ್ಲಿ ನಿರ್ಲಕ್ಷ್ಯ ಭಾವನೆ ಇರುತ್ತದೆ. ಆದರೆ ಇಂಡಿ ವಿಲೇಜ್ ಫೌಂಡೇಶನ್ ಸರ್ಕಾರಿ ಶಾಲೆಯ ವಿದ್ಯಾರ್ಥಿನಿಯರ ಶೈಕ್ಷಣಿಕ ಅಭಿವೃದ್ಧಿಗಾಗಿ 7 ಲ್ಯಾಪ್‌ಟಾಪ್‌ಗಳನ್ನು ವಿತರಿಸಿರುವುದು ಶ್ಲಾಘನೀಯ ಕಾರ್ಯವಾಗಿದೆ. ವಿದ್ಯಾರ್ಥಿನಿಯರು ಇವುಗಳನ್ನು ಸದುಪಯೋಗಪಡಿಸಿಕೊಂಡು ಕಂಪ್ಯೂಟರ್ ಜ್ಞಾನ ಬೆಳೆಸಿಕೊಳ್ಳಬೇಕು ಎಂದು ತಹಶೀಲ್ದಾರ್ ಅಶೋಕ ಪವಾರ್ ಹೇಳಿದರು.

ಪಟ್ಟಣದ ಸರ್ಕಾರಿ ಬಾಲಕಿಯರ ಪ್ರಾಥಮಿಕ ಶಾಲೆಯಲ್ಲಿ ಇಂಡಿ ವಿಲೇಜ್ ಫೌಂಡೇಶನ್ ವತಿಯಿಂದ ವಿತರಿಸಲಾದ 7 ಲ್ಯಾಪ್‌ಟಾಪ್‌ಗಳೊಂದಿಗೆ ಕಂಪ್ಯೂಟರ್ ಲ್ಯಾಬ್ ಉದ್ಘಾಟಿಸಿ ಅವರು ಮಾತನಾಡಿದರು. ಹಿಂದಿನ ಕಾಲದಲ್ಲಿ ಅಕ್ಷರ ಕಲಿಯದವರನ್ನು ಅನಕ್ಷರಸ್ಥರು ಎಂದು ಕರೆಯಲಾಗುತ್ತಿತ್ತು.



ಆದರೆ ಇಂದಿನ ತಂತ್ರಜ್ಞಾನ ಯುಗದಲ್ಲಿ ಶಿಕ್ಷಣದ ಜೊತೆಗೆ ಕಂಪ್ಯೂಟರ್ ಜ್ಞಾನವೂ ಅತ್ಯಗತ್ಯವಾಗಿದೆ. ಫೌಂಡೇಶನ್ ನೀಡಿರುವ ಲ್ಯಾಪ್‌ಟಾಪ್‌ಗಳ ಮೂಲಕ ವಿದ್ಯಾರ್ಥಿನಿಯರು ಕಂಪ್ಯೂಟರ್ ಜ್ಞಾನವನ್ನು ಪಡೆದುಕೊಳ್ಳಬೇಕು. ಈ ಜ್ಞಾನ ಮುಂದಿನ ದಿನಗಳಲ್ಲಿ ಅವರ ಶೈಕ್ಷಣಿಕ ಹಾಗೂ ವೃತ್ತಿ ಜೀವನಕ್ಕೆ ಸಹಕಾರಿಯಾಗಲಿದೆ. ಲ್ಯಾಪ್‌ಟಾಪ್‌ಗಳನ್ನು ಜವಾಬ್ದಾರಿಯಿಂದ ಬಳಸಿ, ಹಲವು ವರ್ಷಗಳ ಕಾಲ ಬಾಳಿಕೆ ಬರುವಂತೆ ಉತ್ತಮವಾಗಿ ನಿರ್ವಹಿಸಬೇಕು.

ಸರ್ಕಾರಿ ಶಾಲೆಯನ್ನು ಗುರುತಿಸಿ ವಿದ್ಯಾರ್ಥಿನಿಯರ ಅನುಕೂಲಕ್ಕಾಗಿ ಲ್ಯಾಪ್‌ಟಾಪ್‌ಗಳನ್ನು ನೀಡಿರುವ ಫೌಂಡೇಶನ್‌ಗೆ ಧನ್ಯವಾದಗಳು ಎಂದರು.



ಈ ಸಂದರ್ಭದಲ್ಲಿ ಶಿರಸ್ತೇದಾರ್ ಫಕ್ರುದ್ದೀನ್, ಇಂಡಿ ವಿಲೇಜ್ ಫೌಂಡೇಶನ್ ಎನ್‌ಜಿಒ ಸಂಯೋಜಕರಾದ ಸುಪ್ರಿಯಾ, ಅನುಷಾ, ಅಮರೇಶ್, ಎಸ್‌ಡಿಎಂಸಿ ಅಧ್ಯಕ್ಷ ಮಲ್ಲಿಕಾರ್ಜುನ, ಮುಖ್ಯಗುರು ರಾಜಾಸಾಬ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಮಹೇಶ್, ಪ್ರಧಾನ ಕಾರ್ಯದರ್ಶಿ ಬಸವರಾಜ್, ಜಿಪಿಟಿ ಶಿಕ್ಷಕರ ಸಂಘದ ಅಧ್ಯಕ್ಷ ಚನ್ನವೀರಯ್ಯ, ಶಿಕ್ಷಕಿಯರಾದ ಶಕುಂತಲಾ, ನಾಗರತ್ನ, ಲಲಿತಾ, ಶೃತಿ, ಭುವನೇಶ್ವರಿ, ಯಲ್ಲಮ್ಮ, ರಮಾದೇವಿ, ವಿಜಯಲಕ್ಷ್ಮಿ ಹಾಗೂ ಮೌಲಾಸಾಬ್ ಉಪಸ್ಥಿತರಿದ್ದರು.

ಕಂಪ್ಲಿಯಿಂದ ಮುನಿರಾಬಾದ್‌ಗೆ ರೈತರ ಬೃಹತ್ ಪಾದಯಾತ್ರೆ



❑ ನೈಜ್ಯ ದೆಸೆ ನ್ಯೂಸ್

ಕಂಪ್ಲಿ: ಬೆಳೆದು ನಿಂತಿರುವ ಭತ್ತ ಸೇರಿದಂತೆ ವಿವಿಧ ಬೆಳೆಗಳಿಗೆ ಡಿಸೆಂಬರ್ 15ರವರೆಗೆ ಸಮರ್ಪಕವಾಗಿ ನೀರು ಹರಿಸಬೇಕೆಂದು ಆಗ್ರಹಿಸಿ ನವೆಂಬರ್ 14ರಂದು ಕಂಪ್ಲಿಯಿಂದ ಮುನಿರಾಬಾದ್‌ನ ತುಂಗಭದ್ರಾ ನೀರಾವರಿ ಸಲಹಾ ಸಮಿತಿ (ಐಸಿಸಿ) ಕಚೇರಿಯವರೆಗೆ ರೈತರ ಬೃಹತ್ ಪಾದಯಾತ್ರೆ ಆಯೋಜಿಸಲಾಗಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯ ಕಾರ್ಯಾಧ್ಯಕ್ಷ ಬಿ.ವಿ.ಗೌಡ ತಿಳಿಸಿದ್ದಾರೆ.

ಪಟ್ಟಣದ ಸಾಂಗಾತ್ರಯ ಸಂಸ್ಕೃತ ಪಾಠ ಶಾಲೆಯಲ್ಲಿ ನಡೆದ ರೈತರ ನೀರಿನ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, "ರೈತರು ಸಾಲಸೋಲ ಮಾಡಿ ಬೆಳೆ ಬೆಳೆದಿದ್ದಾರೆ. ಬೆಳೆ ಕೈಸೇರಲು ಇನ್ನು ಒಂದು ತಿಂಗಳ ಕಾಲ ನೀರಿನ ಅವಶ್ಯಕತೆಯಿದೆ. ಆದರೆ ಸರ್ಕಾರ ಮತ್ತು ಅಧಿಕಾರಿಗಳ ನಾಟಕೀಯ ಧೋರಣೆಯಿಂದಾಗಿ ರೈತರು ಆತಂಕಕ್ಕೆ ಒಳಗಾಗಿದ್ದಾರೆ" ಎಂದು ಆಕ್ರೋಶ ವ್ಯಕ್ತಪಡಿಸಿದರು.

ಹೋರಾಟದ ವಿವರ: ನವೆಂಬರ್ 14ರ ಶನಿವಾರ ಬೆಳಿಗ್ಗೆ 9 ಗಂಟೆಗೆ ಕಂಪ್ಲಿಯಿಂದ ಪಾದಯಾತ್ರೆ ಆರಂಭವಾಗಲಿದ್ದು, ನ.15ರ ಭಾನುವಾರ ಸಂಜೆ ಮುನಿರಾಬಾದ್ ತಲುಪಲಿದೆ. ನವೆಂಬರ್ 16ರ ಸೋಮವಾರ ಬೆಳಿಗ್ಗೆ 10 ಗಂಟೆಗೆ ನೀರಾವರಿ ಸಲಹಾ ಸಮಿತಿ ಕಚೇರಿಗೆ ಮುತ್ತಿಗೆ ಹಾಕಲಾಗುವುದು. ಬೆಳೆಗಳಿಗೆ ನೀರು ಒದಗಿಸುವ ಭರವಸೆ ಸಿಗುವ ತನಕ ಹೋರಾಟ ಮುಂದುವರಿಯಲಿದ್ದು, ತಾಲ್ಲೂಕಿನ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸರ್ಕಾರಕ್ಕೆ ಬಿಸಿ ಮುಟ್ಟಿಸಬೇಕು ಎಂದು ಅವರು ಕರೆ ನೀಡಿದರು. ಸಭೆಯಲ್ಲಿ ರೈತ ಮುಖಂಡರಾದ ಶರಣಬಸವ, ಭರಮರೆಡ್ಡಿ ಜಿ, ವಿ.ವೀರೇಶ್, ಕೆ.ರಮೇಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ವರದಿ: ಜಿಲಾನಸಾಬ್ ಬಡಿಗೇರ್

ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘದ ನೂತನ ಪದಾಧಿಕಾರಗಳ ಆಯ್ಕೆ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಕರ್ನಾಟಕ ರಾಜ್ಯ ನಿವೃತ್ತ ನೌಕರರ ಹಾಗೂ ಕುಟುಂಬ ಪಿಂಚಣಿದಾರರ ಸಿಂಧನೂರು ತಾಲೂಕ ಘಟಕದ ನೂತನ ಪದಾಧಿಕಾರಿಗಳನ್ನು ಐದು ವರ್ಷಗಳ ಅವಧಿಗೆ ಗುರುವಾರ ನವೆಂಬರ್ 5 ರಂದು ನಿವೃತ್ತ ನೌಕರರ ಸಭಾಭವನದಲ್ಲಿ ಟಿ.ಅಯ್ಯಪ್ಪ ಅವರ ಅಧ್ಯಕ್ಷತೆಯಲ್ಲಿ ಅವಿರೋಧವಾಗಿ ಆಯ್ಕೆಮಾಡಲಾಯಿತು ಎಂದು ನೂತನ ಪ್ರಧಾನ ಕಾರ್ಯರ್ಶಿ ಹುಸೇನ್‌ಬಾಷಾ ತಿಳಿಸಿದ್ದಾರೆ.



ಗೌರವ ಅಧ್ಯಕ್ಷರಾಗಿ ಟಿ.ಅಯ್ಯಪ್ಪ, ಅಧ್ಯಕ್ಷರಾಗಿ ಬಸವರಾಜ ವಿ., ಉಪಾಧ್ಯಕ್ಷರಾಗಿ ಹನುಮಂತಯ್ಯ ಗಂಧಿ, ಸಿದ್ದೇಶ್ವರಿ ಪ್ರಧಾನ ಕಾರ್ಯದರ್ಶಿಯಾಗಿ ಹುಸೇನಬಾಷಾ, ಖಜಾಂಚಿಂ-ಯಾಗಿ ಬಸವರಾಜ ಬಿ. ಸಂಘಟನಾ ಕಾರ್ಯದರ್ಶಿಯಾಗಿ ಅಮರೇಶ, ಸುಮಿತ್ರಾ ಹಿರೇಮಠ, ಸಹ ಕಾರ್ಯದರ್ಶಿಗಳಾಗಿ ಪ್ರಭು ಶಂಭೆವಾಡ, ಚಂದ್ರಶೇಖರ ಕಗ್ಗೋಡ, ಸಾಂಸ್ಕೃತಿಕ ಕಾರ್ಯದರ್ಶಿಯಾಗಿ ಬೀರಪ್ಪ ಶಂಭೋಜಿ ಕ್ರೀಡಾ ಕಾರ್ಯದರ್ಶಿಯಾಗಿ ಶೇಕ್‌ನಬಿ, ಆಂತರಿಕ ಲೆಕ್ಕಪರಿಶೋಧಕರಾಗಿ ಅಂಬಣ್ಣ, ಕಾರ್ಯಕಾರಿ ಸಮಿತಿ ಸದಸ್ಯರಾಗಿ ನಾರಾಯಣಸ್ವಾಮಿ, ಅಜಮೀರ್‌ಪಾಷಾ, ಚಂದ್ರಕಲಾ ಮತ್ತು , ನಾಮ ನಿರ್ದೇಶನ ಸದಸ್ಯರುಗಳನ್ನಾಗಿ ಶಾಂತರಾಜ, ಶರ್ಫುದ್ದೀನ್, ಮಹ್ಮದ್ ಅವರನ್ನು ನೇಮಕ ಮಾಡಲಾಯಿತು 25 ವರ್ಷಗಳ ವರೆಗೆ ತಾಲೂಕ ಘಟಕದ ಅಧ್ಯಕ್ಷರಾಗಿ ಸೇವೆ ಸಲ್ಲಿಸಲು ಅವಕಾಶ ನೀಡಿದ್ದಕ್ಕಾಗಿ ನಿವೃತ್ತ ನೌಕರರ ಸಂಘದ ಎಲ್ಲ ಸದಸ್ಯರುಗಳಿಗೆ ಟಿ.ಅಯ್ಯಪ್ಪ ಮತ್ತು ಪ್ರಸ್ತುತ ನೂತನ ಅಧ್ಯಕ್ಷರಾಗಿ ಸೇವೆ ಸಲ್ಲಿಸಲು ಅವಕಾಶ ಕಲ್ಪಿಸಿಕೊಟ್ಟ ಸದಸ್ಯರುಗಳಿಗೆ ಬಸವರಾಜ ವಿ. ಕೃತಜ್ಞತೆಗಳನ್ನು ಸಲ್ಲಿಸಿದ್ದಾರೆ.

ತಾವರಗೇರಾ ಬುದ್ಧ ವಿಹಾರದಲ್ಲಿ ನವೆಂಬರ್ 7ರಿಂದ 9ರವರೆಗೆ ಮೂರು ದಿನಗಳ ವಿದ್ಯಾರ್ಥಿ–ಯುವಜನರ ಅಧ್ಯಯನ ಶಿಬಿರ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ದಲಿತ ವಿದ್ಯಾರ್ಥಿ ಪರಿಷತ್ (DVP) ಮತ್ತು ಭಾರತ ಕ್ರಾಂತಿಕಾರಿ ಯುವಜನರ ಒಕ್ಕೂಟ (ಖಜಈಖ) ಸಂಯುಕ್ತ ಆಶ್ರಯದಲ್ಲಿ 2026ರ ನವೆಂಬರ್ 7ರಿಂದ 9ರವರೆಗೆ ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲೂಕಿನ ತಾವರಗೇರಾ ಬುದ್ಧ ವಿಹಾರದಲ್ಲಿ ಮೂರು ದಿನಗಳ ವಿದ್ಯಾರ್ಥಿ–ಯುವಜನರ ಅಧ್ಯಯನ ಶಿಬಿರವನ್ನು ಆಯೋಜಿಸಲಾಗಿದೆ ಎಂದು ಇಂದು ನಗರದ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಡಿ.ವಿ ಪಿ ರಾಯಚೂರು ಜಿಲ್ಲಾ ಸಂಚಾಲಕ ಮೌನೇಶ್ ಜಾಲವಾಡಗಿ ತಿಳಿಸಿದರು.

ದೇಶದ ರಾಜಕೀಯ ಪರಿಸ್ಥಿತಿ ಅತ್ಯಂತ ಗಂಭೀರವಾಗಿದ್ದು, ಸಂವಿಧಾನದ ಆಶಯಗಳು, ಪ್ರಜಾಪ್ರಭುತ್ವದ ಮೌಲ್ಯಗಳು, ವೈಜ್ಞಾನಿಕ ಮನೋಭಾವ ಮತ್ತು ಸಾಮಾಜಿಕ ನ್ಯಾಯದ ಮೇಲೆ ಸಂಘಟಿತ ದಾಳಿಗಳು ನಡೆಯುತ್ತಿವೆ. ಜಾತಿ ತಾರತಮ್ಯ, ಅಸ್ಪೃಶ್ಯತೆ, ದಲಿತರ ಮೇಲಿನ ದೌರ್ಜನ್ಯ, ಕೋಮುವಾದಿ ರಾಜಕಾರಣ, ನಿರುದ್ಯೋಗ, ಶಿಕ್ಷಣದ ಖಾಸಗೀಕರಣ ಹಾಗೂ ವಿದ್ಯಾರ್ಥಿ–ಯುವಜನರ ಹಕ್ಕುಗಳ ದಮನ ಹೆಚ್ಚಾಗುತ್ತಿದೆ. ಇಂತಹ ಸಂದರ್ಭದಲ್ಲಿ ಯುವಜನರು ಕೇವಲ ಉದ್ಯೋಗದ ಹುಡುಕಾಟಕ್ಕೆ ಸೀಮಿತವಾಗದೆ, ಸಮಾಜದ ಬದಲಾವಣೆಯ ಮುಂಚೂಣಿ ಶಕ್ತಿಗಳಾಗಿ ರೂಪುಗೊಳ್ಳಬೇಕಿದೆ.

ಈ ಉದ್ದೇಶದಿಂದ ಅಧ್ಯಯನ ಶಿಬಿರವನ್ನು ಆಯೋಜಿಸಲಾಗಿದೆ ಎಂದು ಹೇಳಿದರು. ನವೆಂಬರ್ 7ರಂದು ಬೆಳಿಗ್ಗೆ 11 ಗಂಟೆಗೆ ಹಲಗೆ ಬಾರಿಸುವ ಮೂಲಕ ಹಾಗೂ ಸಸಿಗೆ ನೀರೆರೆಯುವ ಮೂಲಕ ಶಿಬಿರಕ್ಕೆ ಚಾಲನೆ ನೀಡಲಾಗುವುದು. ಸಂವಿಧಾನದ ಪೀಠಿಕೆ ವಾಚನದೊಂದಿಗೆ ಉದ್ಘಾಟನಾ ಕಾರ್ಯಕ್ರಮ ನಡೆಯಲಿದೆ. ಡಿವಿಪಿ ರಾಯಚೂರು ಜಿಲ್ಲಾ ಸಂಚಾಲಕ ಮೌನೇಶ್ ಜಾಲವಾಡಗಿ ಅಧ್ಯಕ್ಷತೆ ವಹಿಸಲಿದ್ದಾರೆ. ಶಿಬಿರದಲ್ಲಿ ಆರು ಪ್ರಮುಖ ವಿಷಯಗಳ ಕುರಿತು ಗಂಭೀರ ಅಧ್ಯಯನ ಮತ್ತು ಚರ್ಚೆಗಳು ನಡೆಯಲಿವೆ. ಮಾನವ ಸಮಾಜದ ಇತಿಹಾಸ, ಭಾರತದ ಆಧುನಿಕ ರಾಜಕೀಯ ಚರಿತ್ರೆ, ದಲಿತ ಚಳವಳಿಯ ಬೆಳವಣಿಗೆ, ಸಂವಿಧಾನದ ಆಶಯಗಳು, ಅಸ್ಪೃಶ್ಯತೆ ಮತ್ತು ಜಾತಿ ನಿರ್ಮೂಲನೆಯ ಹಾದಿ ಹಾಗೂ ಇಂದಿನ ವಿದ್ಯಾರ್ಥಿ–ಯುವಜನರ ರಾಜಕೀಯ ಮತ್ತು ಸಾಮಾಜಿಕ ಕಾರ್ಯಭಾರಗಳ ಕುರಿತು ವಿಚಾರ ವಿನಿಮಯ ನಡೆಯಲಿದೆ.



ಇದರ ಜೊತೆಗೆ ಕ್ರಾಂತಿಕಾರಿ ಹಾಡುಗಳ ತರಬೇತಿ, ಕಲೆ, ಸಾಹಿತ್ಯ, ಸಂಸ್ಕೃತಿ ಕುರಿತು ಸಂವಾದ, ಹಾಡು ಮತ್ತು ಹಲಗೆಯ ಕಲಿಕೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಕ್ರಾಂತಿಕಾರಿ ಸಾಂಸ್ಕೃತಿಕ ವೇದಿಕೆಯ ಪ್ರಮುಖರು ಈ ಚಟುವಟಿಕೆಗಳನ್ನು ಮುನ್ನಡೆಸಲಿದ್ದಾರೆ. ಈ ಅಧ್ಯಯನ ಶಿಬಿರ ಕೇವಲ ಮೂರು ದಿನಗಳ ಕಾರ್ಯಕ್ರಮವಲ್ಲ. ಯುವಜನರ ಚಿಂತನೆಗೆ ಹೊಸ ದಿಕ್ಕು ನೀಡುವ ಮತ್ತು ಹೋರಾಟಕ್ಕೆ ಹೊಸ ಶಕ್ತಿ ತುಂಬುವ ವೈಚಾರಿಕ ವೇದಿಕೆಯಾಗಿದೆ.

ಜಾತಿ ವ್ಯವಸ್ಥೆಯ ಸಂಕೋಲೆಗಳನ್ನು ಕಳಚಲು, ಕೋಮುವಾದಿ ಶಕ್ತಿಗಳನ್ನು ಎದುರಿಸಲು, ಶಿಕ್ಷಣ ಮತ್ತು ಉದ್ಯೋಗದ ಹಕ್ಕುಗಳನ್ನು ರಕ್ಷಿಸಲು ಹಾಗೂ ಸಮಾನತೆ, ಸ್ವಾತಂತ್ರ್ಯ ಮತ್ತು ಸಹೋದರತ್ವದ ಸಮಾಜ ನಿರ್ಮಿಸಲು ವಿದ್ಯಾರ್ಥಿ–ಯುವಜನರು ವೈಜ್ಞಾನಿಕ ಹಾಗೂ ಕ್ರಾಂತಿಕಾರಿ ಚಿಂತನೆಗಳನ್ನು ಮೈಗೂಡಿಸಿಕೊಳ್ಳುವುದು ಇಂದಿನ ತುರ್ತು ಅಗತ್ಯವಾಗಿದೆ. ಆದ್ದರಿಂದಈಗಾಗಲೇ ನೋಂದಾಯಿಸಿಕೊಂಡಿರುವ ಹಾಗೂ ನೋಂದಾಯಿಸಿಕೊಳ್ಳಲಿರುವ ಎಲ್ಲ ವಿದ್ಯಾರ್ಥಿ–ಯುವಜನರು ಯಾವುದೇ ಕಾರಣಕ್ಕೂ ಗೈರುಹಾಜರಾಗದೆ ಮೂರು ದಿನಗಳ ಕಾಲ ಪೂರ್ಣ ಪ್ರಮಾಣದಲ್ಲಿ ಶಿಬಿರದಲ್ಲಿ ಪಾಲ್ಗೊಳ್ಳಬೇಕು.

"ಅಧ್ಯಯನ ಮಾಡೋಣ, ಪ್ರಶ್ನಿಸೋಣ, ಸಂಘಟಿತರಾಗೋಣ, ಅನ್ಯಾಯದ ವಿರುದ್ಧ ಹೋರಾಡೋಣ, ಸಮಾನತೆಯ ಸಮಾಜ ಕಟ್ಟೋಣ" ಎಂಬ ಸಂಕಲ್ಪದೊಂದಿಗೆ ಶಿಬಿರವನ್ನು ಯಶಸ್ವಿಗೊಳಿಸಬೇಕೆಂದು ಜಂಟಿ ಸಂಘಟನೆಗಳು ಕರೆ ನೀಡಿವೆ. ಈ ಪತ್ರಿಕಾಗೋಷ್ಠಿಯಲ್ಲಿ ಮೌನೇಶ್ ಜಾಲವಾಡಗಿ ಜಿಲ್ಲಾ ಸಂಚಾಲಕರು, ಆಗಿಕ ರಾಯಚೂರು; ನಿರಂಜನ್ ಎಂ. ಸಂಘಟನಾ ಚಾಲಕರು, ಖಜಈಖ ರಾಯಚೂರು; ಬಸವರಾಜ್ ಬಾಗಲವಾಡ ಖಜಈಖ ರಾಯಚೂರು; ಶಶಿಕುಮಾರ್ ಕೆಸರಟ್ಟಿ DVP ಲಿಂಗಸಗೂರು; ದುರುಗೇಶ್ ಕಲ್ಮಂಗಿ ತಾಲೂಕಾಧ್ಯಕ್ಷರು; ಮೌನೇಶ್ ತುಗ್ಗಲದಿನ್ನಿ ಮಸ್ಕಿ ತಾಲೂಕಾಧ್ಯಕ್ಷರು; ಚನ್ನಬಸವ ಯಾಪಲಪರ್ವಿ ಹಾಗೂ ಅಪ್ಪಯ್ಯ ಸಿಂಧನೂರು ಉಪಸ್ಥಿತರಿದ್ದರು.

ಆರೋಗ್ಯದ ಗುಟ್ಟು ಪೌಷ್ಟಿಕ ಆಹಾರದ ತಟ್ಟೆಯಲ್ಲಿದೆ: ಅರವಿಂದ ಕುಮಾರ್

❑ ನೈಜ್ಯ ದೆಸೆ ನ್ಯೂಸ್

ಗಾಣದಾಳ್: ಗರ್ಭಿಣಿಯರು ಮತ್ತು ಬಾಣಂತಿಯರು ಸಮತೋಲಿತ ಹಾಗೂ ಪೌಷ್ಟಿಕ ಆಹಾರ ಸೇವಿಸುವುದರಿಂದ ತಾಯಿ ಮತ್ತು ಮಗುವಿನ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು. ಪೌಷ್ಟಿಕಾಂಶಯುಕ್ತ ಆಹಾರ ಸೇವನೆಯು ತಾಯಿ ಮತ್ತು ಶಿಶು ಮರಣದ ಅಪಾಯವನ್ನು ಕಡಿಮೆ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಮಟಮಾರಿ ಆರೋಗ್ಯ ಕೇಂದ್ರದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಅರವಿಂದ ಕುಮಾರ್ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಾಯಚೂರು ತಾಲೂಕು ಆರೋಗ್ಯಾಧಿಕಾರಿಗಳ ಕಾರ್ಯಾಲಯ ಹಾಗೂ ಗಾಣದಾಳ್ ಪ್ರಾಥಮಿಕ ಆರೋಗ್ಯ ಕೇಂದ್ರದ ಸಂಯುಕ್ತಾಶ್ರಯದಲ್ಲಿ ಬುಳ್ಳಾಪುರ ಉಪಕೇಂದ್ರ ವ್ಯಾಪ್ತಿಯ ಗುಂಡರ್ವೇಲಿ ಅಂಗನವಾಡಿ ಕೇಂದ್ರದಲ್ಲಿ ಮಂಗಳವಾರ ಆಯೋಜಿಸಿದ್ದ ಪೌಷ್ಟಿಕ ಆಹಾರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಗರ್ಭಾವಸ್ಥೆಯಲ್ಲಿ ಮಹಿಳೆಯರಿಗೆ ಹೆಚ್ಚಿನ ಪೌಷ್ಟಿಕಾಂಶಗಳ ಅಗತ್ಯವಿದ್ದು, ಈ ಅವಧಿಯಲ್ಲಿ ಸಮತೋಲಿತ ಆಹಾರ ಸೇವಿಸುವುದರಿಂದ ತಾಯಿಯ ಆರೋಗ್ಯದ ಜೊತೆಗೆ ಗರ್ಭದಲ್ಲಿರುವ ಮಗುವಿನ ದೈಹಿಕ ಮತ್ತು ಮಾನಸಿಕ ಬೆಳವಣಿಗೆಗೂ ಸಹಕಾರಿಯಾಗುತ್ತದೆ. ಹಸಿರು ಸೊಪ್ಪು, ತರಕಾರಿ, ಹಣ್ಣುಗಳು, ಮೊಟ್ಟೆ, ಮೀನು, ಮೊಳಕೆ ಕಾಳುಗಳು ಸೇರಿದಂತೆ ಸ್ಥಳೀಯವಾಗಿ ದೊರೆಯುವ ಪೌಷ್ಟಿಕ ಆಹಾರ ಪದಾರ್ಥಗಳನ್ನು ಸೇವಿಸಬೇಕು ಎಂದು ಸಲಹೆ ನೀಡಿದರು.

ಆಹಾರದಲ್ಲಿ ಪ್ರೋಟೀನ್, ವಿಟಮಿನ್, ಖನಿಜಾಂಶ, ಕಾರ್ಬೋಹೈಡ್ರೇಟ್ ಹಾಗೂ ಆರೋಗ್ಯಕರ ಕೊಬ್ಬಿನಾಂಶಗಳು ಸಮರ್ಪಕವಾಗಿರಬೇಕು. ಆಹಾರದ ಸ್ವಚ್ಛತೆ, ಅಡುಗೆ ಮನೆಯ ನೈರ್ಮಲ್ಯ ಹಾಗೂ ಅಯೋಡಿನ್‌ಯುಕ್ತ ಉಪ್ಪಿನ ಬಳಕೆಗೂ ಆದ್ಯತೆ ನೀಡಬೇಕು. ಗರ್ಭಿಣಿಯರು ಮತ್ತು ಬಾಣಂತಿಯರು ಆರೋಗ್ಯ ಸಿಬ್ಬಂದಿಯ ಸಲಹೆಯಂತೆ ಕಬ್ಬಿಣಾಂಶ ಹಾಗೂ ಕ್ಯಾಲ್ಸಿಯಂ ಮಾತ್ರೆಗಳನ್ನು ನಿಯಮಿತವಾಗಿ ಸೇವಿಸಬೇಕು ಎಂದು ತಿಳಿಸಿದರು. ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಉಷಾರಾಣಿ ಮಾತನಾಡಿ, ಗರ್ಭಿಣಿಯರು ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ನಿಯಮಿತವಾಗಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು. ಮನೆಯಲ್ಲಿಯೇ ತಯಾರಿಸಿದ ತಾಜಾ ಆಹಾರ ಸೇವಿಸಿ, ಬೇಕರಿ ಪದಾರ್ಥಗಳು ಹಾಗೂ ಅತಿಯಾಗಿ ಸಂಸ್ಕರಿಸಿದ ಜಂಕ್ ಫುಡ್‌ಗಳಿಂದ ದೂರವಿರಬೇಕು ಎಂದು ಸಲಹೆ ನೀಡಿದರು.

ಮಗುವಿನ ಜನನದ ನಂತರವೂ ತಾಯಿಯ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು. ಬಾಣಂತಿಯರು ಕುಟುಂಬ ಯೋಜನೆಯ ಸೂಕ್ತ ವಿಧಾನಗಳನ್ನು ಅನುಸರಿಸಿ ಮಕ್ಕಳ ಜನನದ ನಡುವೆ ಕನಿಷ್ಠ ಮೂರು ವರ್ಷಗಳ ಅಂತರ ಕಾಪಾಡಿಕೊಳ್ಳುವುದರಿಂದ ತಾಯಿ ಮತ್ತು ಮಗುವಿನ ಆರೋಗ್ಯಕ್ಕೆ ಅನುಕೂಲವಾಗುತ್ತದೆ ಎಂದು ಹೇಳಿದರು. ಅಂಗನವಾಡಿ ಕಾರ್ಯಕರ್ತೆ ಅಂಬುಜಾಕ್ಷಿ ಮಾತನಾಡಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಗರ್ಭಿಣಿಯರು, ಬಾಣಂತಿಯರು ಹಾಗೂ ಮಕ್ಕಳಿಗೆ ದೊರೆಯುವ ಪೌಷ್ಟಿಕ ಆಹಾರ ಮತ್ತು ವಿವಿಧ ಕಲ್ಯಾಣ ಸೇವೆಗಳ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಗುಂಡರ್ವೇಲಿ ಗ್ರಾಮದ ಗರ್ಭಿಣಿಯರು, ಬಾಣಂತಿಯರು ಹಾಗೂ ಅಂಗನವಾಡಿ ಕೇಂದ್ರದ ಫಲಾನುಭವಿಗಳು ಭಾಗವಹಿಸಿದ್ದರು. ಆಶಾ ಕಾರ್ಯಕರ್ತೆ ಪಾರ್ವತಿ ಕಾರ್ಯಕ್ರಮ ನಿರೂಪಿಸಿ, ವಂದನಾರ್ಪಣೆ ಸಲ್ಲಿಸಿದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101